ಸಂಪುಟ : 10 ಸಂಚಿಕೆ: 244 ಪುಟ : 4+2 ಬೆಲೆ: 3.00 ರವಿವಾರ ನವೆಂಬರ್ 09 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 244 Pages : 4+2 Price : 3.00 Sunday November 09 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕರ್ನಾಟಕ ಇತಿಹಾಸ ಅಕಾಡೆಮಿಯ 39ನೇ ವಾರ್ಷಿಕ ರಾಷ್ಟ್ರೀಯ ಸಮ್ಮೇಳನ, ಪ್ರಶಸ್ತಿ ಪ್ರದಾನ ಸಮಾರಂಭ

# ಇತಿಹಾಸಕಾರರು ಗದುಗಿನ ಪ್ರಾಮುಖ್ಯತೆಯನ್ನು ಅರಿಯಲಿ



ಕರ್ನಾಟಕದಲ್ಲಿರುವ ಪ್ರಾಚ್ಯಾವಶೇಷಗಳ ಕುರಿತು ಸಂಪೂರ್ಣ ಸಮೀಕ್ಷೆ ಮಾಡುವ ಕೆಲಸ ಆರಂಭಿಸಲಾಗಿದೆ. ಸ್ಮಾರಕ ದತ್ತು ಯೋಜನೆಯಡಿಯಲ್ಲಿ ಇತಿಹಾಸಕಾರರು ಆಸಕ್ತಿವಹಿಸಿ ರಾಜ್ಯದ 119 ತಾಲೂಕಗಳಲ್ಲಿ ಸರ್ವೆ ಮಾಡಿ ಸಮೀಕ್ಷಾ ಕಾರ್ಯವನ್ನು ಪೂರ್ಣಗೋಳಿಸಬೇಕು. ನಂತರ ಡಿಜಿಟಲೀಕರಣಗೊಳಿಸಬೇಕು ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದಲ್ಲಿರುವ ವೈವಿಧ್ಯಮಯ ಸ್ಮಾರಕಗಳು ಇನ್ನೆಲ್ಲಿಯೂ ಕಂಡುಬರುವುದಿಲ್ಲ. ಹಾಗಾಗಿ ಕರ್ನಾಟಕ ವಾಸ್ತುಶಿಲ್ಪಗಳ ತೊಟ್ಟಿಲು ಹಾಗೂ ಪ್ರಯೋಗಾಲಯವಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ಶನಿವಾರ ಮಹಾತ್ಮ ಗಾಂಧಿ ಆರ್‌ಡಿಪಿಆರ್ ವಿಶ್ವವಿದ್ಯಾಲಯದಲ್ಲಿ ಕರ್ನಾಟಕ ಇತಿಹಾಸ ಅಕಾಡೆಮಿ, ಮಹಾತ್ಮ ಗಾಂಧಿ ಆರ್‌ಡಿಪಿಆರ್ ವಿಶ್ವವಿದ್ಯಾಲಯ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಗಳ ಸಹಯೋಗದಲ್ಲಿ ಜರುಗಿದ 39ನೇ ವಾರ್ಷಿಕ ರಾಷ್ಟ್ರೀಯ ಸಮ್ಮೇಳನ ಮತ್ತು ಪ್ರಶಸ್ತಿ ಪ್ರಧಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗದಗ ಜಿಲ್ಲೆಯಲ್ಲಿ ಅತಿಹೆಚ್ಚು ವಾಸ್ತು ಶಿಲ್ಪಗಳಿದ್ದು, ಇಲ್ಲಿರುವ ಒದೊಂದು ಕಲ್ಲೂ ಒದೊಂದು ಇತಿಹಾಸ ಹೇಳುತ್ತವೆ. ಲಕ್ಕುಂಡಿಯಲ್ಲಿ 101 ಬಾವಿ, 101 ಗುಡಿಗಳಿದ್ದು, ಲಕ್ಕುಂಡಿ ಪ್ರಾಧಿಕಾರದ ಸಹಯೋಗದಲ್ಲಿ ಉತ್ಖನನ ಕಾರ್ಯ ಹಮ್ಮಿಕೊಂಡು ಹುದುಗಿ ಹೋದ ಶಾಸನ, ಕಲಾಕೃತಿಗಳನ್ನು ಸಂಗ್ರಹಿಸಿ ತೆರೆದ ಮೈದಾನದಲ್ಲಿ ಇಡಲಾಗಿದೆ. ಗದಗ ಜಿಲ್ಲೆಯಲ್ಲಿ ನಯಸೇನ, ಭೀಮಸೇನ ಜೋಶಿ, ಕುಮಾರವ್ಯಾಸ, ಹುಯಿಲಗೋಳ ನಾರಾಯಣರಾವ್, ಕೆ.ಎಚ್. ಪಾಟೀಲರಂತಹ ಅನೇಕ ಮಹಾತ್ಮರು ಜನಿಸಿ ಜಿಲ್ಲೆಯನ್ನು ಶ್ರೀಮಂತಗೊಳಿಸಿದ್ದಾರೆ. ಹಾಗಾಗಿ ಇತಿಹಾಸಕಾರರು ಗದಗ ಜಿಲ್ಲೆಯ ಪ್ರಾಮುಖ್ಯತೆಯನ್ನು ತಿಳಿಯಬೇಕು ಎಂದರು.

ಜಿಲ್ಲೆಯಲ್ಲಿ ಹರಿದಿರುವ ತುಂಗಭದ್ರಾ ಮತ್ತು ಮಲಪ್ರಭಾ ನದಿಯ ದಂಡೆಗಳು ಪ್ರಾಚೀನ ಕಾಲದಲ್ಲಿಯೇ ನಾಗರಿಕತೆಯನ್ನು ಹುಟ್ಟುಹಾಕಿವೆ. ಈ ನೆಲದಲ್ಲಿ ಅನೇಕ ಪ್ರಾಗೈತಿಹಾಸಿಕ ಕುರುಹುಗಳು ಕಂಡುಬಂದಿವೆ ಎಂದು ಹೇಳಿದರು.

ಸಮ್ಮೇಳನದ ಸರ್ವಾಧ್ಯಕ್ಷ ಡಾ. ರಾಜಾರಾಮ ಹೆಗಡೆ ಮಾತನಾಡಿ, ಗ್ರಾಮೀಣ ಭಾಗದ ಐತಿಹಾಸಿಕ ಸ್ಥಳಗಳಲ್ಲಿ ಹುದುಗಿಹೋದ ಪ್ರಾಚ್ಯಾವಶೇಷಗಳ ಉತ್ಖನನ ಕಾರ್ಯ ಮಾಡಿ ಸಂಶೋಧನೆ ಮಾಡಲು ನಿಟ್ಟಿನಲ್ಲಿ ಸರ್ವೆ ಕಾರ್ಯವನ್ನು ಲಕ್ಕುಂಡಿಯಲ್ಲಿ ಮಾಡಿದ ಸಚಿವರು ಇತಿಹಾಸಕಾರರಿಗೆ ಸ್ಫೂರ್ತಿಯಾಗಿದ್ದಾರೆ ಮತ್ತು ಇತಿಹಾಸ ಬಗ್ಗೆ ಅವರ ಕಾಳಜಿ ನಮ್ಮೆಲ್ಲರಿಗೂ ಧೈರ್ಯ ತುಂಬಿದೆ. ಸಚಿವರ ಆಶಯದಂತೆ ರಾಜ್ಯದ ಪ್ರತಿ ತಾಲೂಕಿನಲ್ಲಿ ಸರ್ವೆ ಕೈಗೊಂಡು ಮಾಹಿತಿಯನ್ನು ಕಲೆಹಾಕಲು ಇದು ಸುವರ್ಣ ಕ್ಷಣವಾಗಿದೆ ಎಂದರು.

ಸಮಾರಂಭದಲ್ಲಿ ಇತಿಹಾಸ ತಜ್ಞ ಡಾ. ಶ್ರೀನಿವಾಸ ವಿ.ಪಾಡಿಗಾರ, ಡಾ. ಕೆ.ವಸಂತಲಕ್ಷ್ಮೀ, ಡಾ. ಎಸ್.ನಾಗರಾಜಪ್ಪ, ಡಾ. ಮಲ್ಲಿಕಾರ್ಜುನ ಕುಂಬಾರ, ಡಾ. ಶರಣಬಸಪ್ಪ ಕೋಲ್ಕಾರ, ಡಾ. ರಮೇಶ ನಾಯಕ, ಡಾ. ಪದ್ಮಜಾ ದೇಸಾಯಿ, ಪ್ರೊ. ಶಾಶ್ವತಸ್ವಾಮಿ ಮುಕ್ಕುಂದಿಮಠ, ಡಾ. ಎಂ.ಕೊಟ್ರೇಶ್, ಮಹಾದೇವ ಜಗತಾಪ, ಡಾ. ಎ.ಓ. ನರಸಿಂಹಮೂರ್ತಿ, ಒವನ್ ಮೌರ್ಯ ಚಕ್ರವರ್ತಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ವಿಶ್ವವಿದ್ಯಾಲಯದ ಸಹಾಯಕ ನಿರ್ದೇಶಕ ಡಾ. ಅಬ್ದುಲ್ ಮುಲ್ಲಾ ಪ್ರಾಸ್ತಾವಿಕಾವಾಗಿ ಮಾತನಾಡಿ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಇತಿಹಾಸ ತಜ್ಞ ಡಾ. ಲಕ್ಷ್ಮಣ್ ತೆಲಗಾವಿ, ವಿಶ್ವವಿದ್ಯಾಲಯದ ಕುಲಪತಿ ಡಾ. ಸುರೇಶ ನಾಡಗೌಡರ, ಶರಣು ಗೋಗೇರಿ, ಡಾ. ದೇವರಕೊಂಡಾರೆಡ್ಡಿ ಹಾಜರಿದ್ದರು. ದತ್ತ ಪ್ರಸನ್ನ ಪಾಟೀಲ ಕಾರ್ಯಕ್ರಮ ನಿರ್ವಹಿಸಿದರು.

### ಕಿತ್ತೂರರಾಣಿ ಚೆನ್ನಮ್ಮ, ಕನಕದಾಸ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಶಾಸಕ ಬಸನಗೌಡ ಪಾಟೀಲ್ ಯತ್ನಾಳ

# ಮುಂದಿನ ಮುಖ್ಯಮಂತ್ರಿ ಯತ್ನಾಳ್!

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಸವೇಶ್ವರ ಸರ್ಕಲ್‌ನಲ್ಲಿ ಕಿತ್ತೂರರಾಣಿ ಚೆನ್ನಮ್ಮ ಮತ್ತು ಕನಕದಾಸರ ಜಯಂತ್ಯುತ್ಸವದ ಅಂಗವಾಗಿ ಬೃಹತ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೆ ಆಗಮಿಸಿದ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳರನ್ನು ಅದ್ಧೂರಿಯಾಗಿ ಸ್ವಾಗತಿಸಲಾಯಿತು. ಈ ಸಂದರ್ಭದಲ್ಲಿ ಮುಂದಿನ ಮುಖ್ಯಮಂತ್ರಿ ಯತ್ನಾಳ್ ಎಂಬ ಘೋಷಣೆಗಳು ಮೊಳಗಿದ್ದವು. ಈ ವೇಳೆ ಯತ್ನಾಳ್ ಭಾಷಣ ಆರಂಭಿಸುವಂತೆ ಮತ್ತೆ ಮುಂದಿನ ಸಿಎಂ ಯತ್ನಾಳ್ ಎಂಬ ಘೋಷಣೆ ಮೊಳಗಿತ್ತು.




ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಬಸನಗೌಡ ಪಾಟೀಲ್ ಯತ್ನಾಳ, ಧರ್ಮ ಮತ್ತು ಸಮಾಜ ರಕ್ಷಣೆಗಾಗಿ ಜೆಸಿಬಿ ತರಬೇಕಾಗಿದೆ. ಈಗ ಗ್ಯಾರಂಟಿ ಸರ್ಕಾರ ಬೇಡ, ಸ್ವಾಭಿಮಾನಿಯಾಗಿ ಜೀವಿಸಲು ಅನುಕೂಲ ಕಲ್ಪಿಸುವ ಸರ್ಕಾರ ಬೇಕು. ದುಬೈ, ಮಾರಿಷಿಯಸ್‌ನಲ್ಲಿ ನಾಯಕರು ಆಸ್ತಿ ಮಾಡಿದ್ದಾರೆ. ಜೆಸಿಬಿ ಕ್ರಾಂತಿ ಮೂಲಕ ಈ ಸಮಸ್ಯೆಗಳನ್ನು ಪರಿಹರಿಸಬೇಕೆಂದು ಜನರ ಗಮನಕ್ಕೆ ತರುವುದು ಮುಖ್ಯವಾಗಿದೆ. ರೈತರ ಮೇಲೆ ನಿಜವಾದ ಕಾಳಜಿ ಇದ್ದರೆ ನೀರಾವರಿ ಯೋಜನೆಗಳು ಪೂರ್ಣಗೊಳ್ಳಬೇಕು, ಆಲಮಟ್ಟಿ ಡ್ಯಾಂ ಕಾರ್ಯ ಸಿದ್ಧವಾಗಬೇಕು ಎಂದು ಹೇಳಿದರು.

ಗದಗ ನಗರದಲ್ಲಿ 17 ಕೋಟಿ ರೂ. ವೆಚ್ಚದಲ್ಲಿ ಕಸಾಯಿಖಾನೆ ನಿರ್ಮಾಣ ಮಾಡುತ್ತಿದ್ದಾರೆ. ವಿಜಯಪೂರದಲ್ಲೂ ಅನುದಾನ ಬಂದಿತ್ತು. ಆದರೆ ನಾನು ಅನುಮತಿ ನೀಡಿಲ್ಲ. ರಾಜ್ಯದಲ್ಲಿ 2.13 ಲಕ್ಷ ಸರ್ಕಾರಿ ಹುದ್ದೆಗಳು ಖಾಲಿಯಿವೆ. ಖಾಲಿ ಹುದ್ದೆಗಳನ್ನು ಭರ್ತಿ ಮಾಡಿದರೆ ಬಿಪಿಎಲ್‌ನಿಂದ ಮುಕ್ತರಾಗಬಹುದು. ಅದಕ್ಕಾಗಿ ಗ್ಯಾರಂಟಿ ಯೋಜನೆಗಳೇನೂ ಅಗತ್ಯವಿಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ಕಿಡಿಕಾರಿದರು.

ಕಾಂಗ್ರೆಸ್ ಸರ್ಕಾರದಿಂದ ದೇಶದ್ರೋಹಿಗಳಿಗೆ ಜೈಲಿನಲ್ಲಿ ಸಕಲ ಸೌಲಭ್ಯಗಳು ಸಿಗುತ್ತಿವೆ. ಈ ಬಗ್ಗೆ ಸಮಗ್ರ ತನಿಖೆಯಾಗಿ ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಬೇಕು. ಜೈಲು ವಿಶ್ರಾಂತಿ ಧಾಮವಲ್ಲ, ಶಿಸ್ತು ಕಡ್ಡಾಯ. ಸಕ್ಕರೆ ಕಾರ್ಖಾನೆಗಳ ವಿಷಯದಲ್ಲಿ ಸರ್ಕಾರ ವ್ಯವಸ್ಥಿತವಾಗಿ ಮೋಸ ಮಾಡುತ್ತಿದೆ. ಕಾರ್ಖಾನೆಗಳು ಉತ್ಪಾದಿಸಿದ ವಿದ್ಯುತ್ ಖರೀದಿಸದಿದ್ದರೆ ರೈತರಿಗೆ ಲಾಭ ಏರುತ್ತಿಲ್ಲ. ಆಡಳಿತ ಮಂಡಳಿಯ ಭ್ರಷ್ಟಾಚಾರ, ಲೂಟಿ ನಿಲ್ಲಿಸಬೇಕು. ರೈತರ ಬಾಕಿ ಪರಿಹರಿಸಬೇಕು ಎಂದು ಹೇಳಿದರು.

ಮುಂದಿನ ಸಿಎಂ ಸ್ಥಾನ, ಪಕ್ಷದ ಗೊಂದಲ ಮತ್ತು ನವೆಂಬರ್ ಕ್ರಾಂತಿಯ ಹಿನ್ನೆಲೆಗಳ ಕುರಿತು ಬಸನಗೌಡ ಪಾಟೀಲ್ ಯತ್ನಾಳ ಮಾತನಾಡಿ, ತುಳು ದೈವ ಡಿಕೆಶಿ ಸಿಎಂ ಆಗುತ್ತಾನೆ ಎಂದರೆ ನಾವು ಏನು ಮಾಡೋದು, ಸಿದ್ದರಾಮಯ್ಯ ಅವರೇ ಮುಂದುವರೆಯುವುದು ಒಳ್ಳೆಯದು. ಆದರೆ ಅವರ ಮೌನದ ಕಾರಣ ಗೊತ್ತಿಲ್ಲ, ರಾಜಣ್ಣ ನಿಯೋಗದ ಕಾರ್ಯ ನಿರ್ವಹಿಸುತ್ತಿದ್ದಾರೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

# ಶಿಕ್ಷಕರ ಅಮಾನತ್ತು ರದ್ದುಪಡಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕದಡಿ ಗ್ರಾಮದ ಸರ್ಕಾರಿ ಪ್ರೌಢಶಾಲೆ ಇತ್ತೀಚೆಗೆ ಭೇಟಿ ನೀಡಿದ ಶಾಲಾ ಶಿಕ್ಷಣ ಇಲಾಖೆಯ ಬೆಳಗಾವಿ ವಿಭಾಗದ ಅಪರ ಆಯುಕ್ತರಾದ ಡಾ. ಈಶ್ವರ ಉಳ್ಳಾಗಡ್ಡಿಯವರು ಮೊದಲನೇ ಬಾರಿಗೆ ಪ್ರಭಾರಿ ಮುಖ್ಯೋಪಾಧ್ಯಾಯರು ಹಾಗೂ ಎಲ್ಲಾ ಸಹ ಶಿಕ್ಷಕರಿಗೆ ನೋಟಿಸ್ ನೀಡಿದ್ದಾರೆ. ಅದಕ್ಕೆ ಸಂಬಂಧಿಸಿದಂತೆ ಶಿಕ್ಷಕರು ಸಮರ್ಪಕವಾಗಿ ಸೂಕ್ತ ದಾಖಲೆಗಳೊಂದಿಗೆ ಉತ್ತರಿಸಿದ್ದಾರೆ. ಆದರೂ ಕೆಲವು ಶಿಕ್ಷಕರಿಗೆ ಮಾತ್ರ ಆಯುಕ್ತರು ಅಮಾನತ್ತು ಆದೇಶದ ಅಸ್ತ್ರವನ್ನು ಪ್ರಯೋಗಿಸಿದ್ದಾರೆ ಎಂದು ರಾಜ್ಯ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಆರ್.ಕಲ್ಮನಿಯವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಅಮಾನತ್ತುಗೊಂಡಿರುವ ಶಿಕ್ಷಕರು ತಾವು ನಿರ್ವಹಿಸಿದ ಎಲ್ಲಾ ಶೈಕ್ಷಣಿಕ ಚಟುವಟಿಕೆಗಳನ್ನು ಜಿಪಿಎಸ್



ಫೋಟೋ ಸಮೇತ ದಾಖಲೆಗಳನ್ನು ಕಚೇರಿಗೆ ಸಲ್ಲಿಸಿದ್ದಾರೆ. ಆದರೂ ಮಾನ್ಯ ಆಯುಕ್ತರು ಸಮರ್ಪಕವಾಗಿ ಪರಿಶೀಲಿಸದೆ ಪ್ರಾಮಾಣಿಕ ಶಿಕ್ಷಕರ ಮೇಲೆ ಅಮಾನತ್ತು ಅಸ್ತ್ರವನ್ನು ಪ್ರಯೋಗಿಸಿದ್ದು ಶಿಕ್ಷಕರ ಸಮುದಾಯಕ್ಕೆ ಮಾಡಿದ ಅವಮಾನವಾಗಿದೆ. ತಕ್ಷಣ ಈ ಅಮಾನತ್ತು ಆದೇಶವನ್ನು ರದ್ದುಪಡಿಸಿ ಸದರಿ ಶಿಕ್ಷಕರನ್ನು ಅದೇ ಶಾಲೆಯಲ್ಲಿ ಸೇವೆಯಲ್ಲಿ ಮುಂದುವರೆಸಬೇಕು ಎಂದು ಪಿ.ಕೆ. ಚಲವಾದಿ, ಬಿ.ಬಿ. ಹಿರೇಮಠ. ಕೆ.ಟಿ. ಮುಲ್ಲಾ, ಎಂ.ಜಿ. ಮಾದರ, ಬಿ.ಸಿ. ಪಾಟೀಲ. ಎಂ.ಮಮತಾ, ಪಿ.ಕೆ. ಲತಾ ಸೇರಿದಂತೆ ಹಲವಾರು ಶಿಕ್ಷಕರು ಮತ್ತು ಉಪನ್ಯಾಸಕರು ಆಯುಕ್ತರನ್ನು ಆಗ್ರಹಿಸಿದ್ದಾರೆ.

### ತಾಲೂಕು ಆಡಳಿತದಿಂದ ದಾಸಶ್ರೇಷ್ಠ ಶ್ರೀ ಕನಕದಾಸ ಜಯಂತಿ ಆಚರಣೆ

# ದಾಸರಲ್ಲಿ ಶ್ರೇಷ್ಠರು ಕನಕದಾಸರು



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹಾವೇರಿ ಜಿಲ್ಲೆಯ ಶಿಗ್ಗಾಂವ ತಾಲೂಕಿನ ಬಾಡ ಗ್ರಾಮದಲ್ಲಿ ಕನಕದಾಸರು ಜನಿಸಿದರು. ತಾಯಿ ಬಚ್ಚಮ್ಮ, ತಂದೆ ಭರಮಗೌಡರು. ಯುದ್ಧದಲ್ಲಿ ಸೋತು ಮನನೊಂದು, ದೈವ ವಾಣಿ ಮೂಲಕ ದೈವ ದಾಸರಾಗಿ ಉಡುಪಿಯಲ್ಲಿ ಶ್ರೀ ಕೃಷ್ಣನನ್ನು ಆರಾಧಿಸಿ ಒಲಿಸಿಕೊಂಡು ಕೃಷ್ಣನ ಭಕ್ತರಾದವರು ಕನಕದಾಸರು ಎಂದು ಶಾಸಕ ಮಹೇಶ ಟೆಂಗಿನಕಾಯಿ ಹೇಳಿದರು.

ಶನಿವಾರ ತಾಲೂಕು ಪಂಚಾಯಿತಿ ಸಭಾಭವನದಲ್ಲಿ ತಾ.ಪಂ ಹಾಗೂ ▸▸ 3ನೇ ಪುಟಕ್ಕೆ

ಕೀರ್ತನೆಗಳ ರಚನೆಯ ಮೂಲಕ ಕನ್ನಡ ಸಾಹಿತ್ಯಕ್ಕೆ ಸ್ಮರಣೀಯ ಕೊಡುಗೆಗಳನ್ನು ನೀಡಿದ್ದಾರೆ. ಉಡುಪಿಯಲ್ಲಿ ಶ್ರೀ ಕೃಷ್ಣನ ಲೀಲೆ ಎಷ್ಟಿದೆಯೋ ಅಷ್ಟೇ ಕನಕದಾಸರ ಭಕ್ತಿಯೂ ಇದೆ. ದಾಸರಲ್ಲಿ ಶ್ರೇಷ್ಠರು ಕನಕದಾಸರು. ಕನಕದಾಸರು ಹಾಕಿ ಕೊಟ್ಟಿರುವ ಮಾರ್ಗದಲ್ಲಿ ನಾವು ನಡೆಯಬೇಕು. ಮುಂದಿನ ಪೀಳಿಗೆಗೆ ದಾಸರ ವ್ಯಕ್ತಿತ್ವವನ್ನು ತಿಳಿಸಿ ಸಮಾಜವನ್ನು ಒಗ್ಗಟ್ಟಾಗಿರುವಂತೆ ನೋಡಿಕೊಳ್ಳಬೇಕು ಎಂದು ಶಾಸಕ ಮಹೇಶ ಟೆಂಗಿನಕಾಯಿ ತಿಳಿಸಿದರು.

### ಗದಗ ಜಿಲ್ಲಾ ಬಿಜೆಪಿ ವತಿಯಿಂದ 'ವಂದೇ ಮಾತರಂ' ಗೀತೆಯ ಸಂಭ್ರಮಾಚರಣೆ

# 'ವಂದೇ ಮಾತರಂ' ಗೀತೆಯನ್ನು ಪಕ್ಷಾತೀತವಾಗಿ ಗೌರವಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಬಿಜೆಪಿ ವತಿಯಿಂದ ಬಂಗಾಳಿಯ ಬಂಕಿಮಚಂದ್ರ ಚಟರ್ಜಿ ರಚಿಸಿದ ವಂದೇ ಮಾತರಂ ಗೀತೆಗೆ 150 ವರ್ಷ ತುಂಬಿರುವ ಹಿನ್ನೆಲೆಯಲ್ಲಿ ನಗರದ ತೋಂಟದಾರ್ಯ ಮಠದ ಎದುರು ಸಂಭ್ರಮಾಚರಣೆಯನ್ನು ಆಚರಿಸಲಾಯಿತು.

ಶಾಸಕ ಸಿ.ಸಿ. ಪಾಟೀಲ ಮಾತನಾಡಿ, ಬಂಗಾಳಿ ಕವಿ ಬಂಕಿಮಚಂದ್ರ ಚಟರ್ಜಿ ಅವರು ರಚಿಸಿರುವ ವಂದೇ ಮಾತರಂ ಗೀತೆಯನ್ನು ದೇಶದ ಎಲ್ಲ ರಾಜಕೀಯ ಪಕ್ಷಗಳು ಪಕ್ಷಾತೀತವಾಗಿ ಹಾಡಿ ಗೌರವಿಸಬೇಕು. ದೇಶದ ಸ್ವಾತಂತ್ರ್ಯ ಚಳುವಳಿಯಲ್ಲಿ ಈ ಗೀತೆ ಪ್ರಭಾವ ಬೀರುವ ಮೂಲಕ ದೇಶಾದ್ಯಂತ ದೇಶಪ್ರೇಮವನ್ನು ಪಸರಿಸಿತ್ತು ಎಂದು ಸ್ಮರಿಸಿದರು.

ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಈ ಅಮರ ಗೀತೆ-ಯ 150ನೇ ವಾರ್ಷಿಕೋತ್ಸವದ ಸ್ಮರಣಾರ್ಥ ಭಾರತ ಸರ್ಕಾರವು ನವೆಂಬರ್ 7ರಿಂದ ಒಂದು ವರ್ಷದವರೆಗೆ ರಾಷ್ಟ್ರವ್ಯಾಪಿ ಕಾರ್ಯಕ್ರಮಗಳನ್ನು ಆಯೋಜಿಸಲು ನಿರ್ಧರಿಸಿರುವುದು ಸ್ವಾಗತಾರ್ಹ ಎಂದರು.



ಈ ಸಂದರ್ಭದಲ್ಲಿ ಮಾಜಿ ಸಚಿವ ಕಳಕಪ್ಪ ಬಂಡಿ, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ಪಕ್ಕಿರೇಶ ರಟ್ಟಿಹಳ್ಳಿ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ, ಮುಖಂಡರಾದ ಬಿ.ಎಚ್. ಲದ್ವಾ, ತೋಟೊಸಾ ಭಾಂಡಗೆ, ನಾಗರಾಜ ಕುಲಕರ್ಣಿ, ಜಗನ್ನಾಥಸಾ ಭಾಂಡಗೆ, ಸುರೇಶ ಮರಳಪ್ಪನವರ, ಬೂದಪ್ಪ ಹಳ್ಳಿ, ವಿಜಯಕುಮಾರ ಗಡ್ಡಿ, ರಮೇಶ ಸಜ್ಜಗಾರ, ಸಂತೋಷ ಅಕ್ಕಿ, ನವೀನ ಕೊಟೆಕಲ್, ಮಂಜುನಾಥ ಶಾಂತಗೇರಿ, ಶಂಕರ ಕಾಕಿ, ಸಂಜೀಕುಮಾರ ಖಟವಟೆ, ಪ್ರಶಾಂತ ನಾಯ್ಕರ, ಶಿವು ಹಿರೇಮನಿಪಾಟೀಲ ಉಷಾ ದಾಸರ, ವಿದ್ಯಾವತಿ ಗಡಗಿ, ವಿಜಯಲಕ್ಷ್ಮೀ ದಿಂಡೂರ, ಶಶಿಧರ ದಿಂಡೂರ, ವಿನಾಯಕ ಮಾನ್ವಿ, ಚಂದ್ರು ತಡಸದ, ಅನಿಲ ಅಬ್ಬಿಗೇರಿ, ಅಶೋಕ ನವಲಗುಂಡ, ಶ್ರೀಪತಿ ಉಡುಪಿ ಸೇರಿದಂತೆ ಮಹಿಳಾ ಮೋರ್ಚಾ ಮುಖಂಡರು ಉಪಸ್ಥಿತರಿದ್ದರು.

ಬಿಜೆಪಿ ರಾಜ್ಯ ಯುವ ಮೋರ್ಚಾ ಉಪಾಧ್ಯಕ್ಷ ಮಲ್ಲಿಕಾರ್ಜುಜ ಬಾಳಿಕಾಯಿ ಮಾತನಾಡಿ, ದೇಶದ ಸ್ವಾತಂತ್ರ್ಯ ಚಳುವಳಿಯಲ್ಲಿ ಮಂದಗಾಮಿ ಮತ್ತು ಉಗ್ರಗಾಮಿಗಳಿಗೆ ಪ್ರೇರಣೆ ನೀಡಿರುವ ಗೀತೆ ವಂದೇ ಮಾತರಂ ಆಗಿತ್ತು. ವಂದೇ ಮಾತರಂ ಗೀತೆಗೆ 150 ವರ್ಷ ತುಂಬಿರುವ ಹಿನ್ನೆಲೆಯಲ್ಲಿ ಬಿಜೆಪಿ ಸಂಭ್ರಮಾಚರಣೆಯ ಮೂಲಕ ಗೌರವ ಸಲ್ಲಿಸುತ್ತಿದೆ ಎಂದರು.



ಲಕ್ಷ್ಮೇಶ್ವರದ ಸರ್ಕಾರಿ ಹಿರಿಯ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯಲ್ಲಿ ಶನಿವಾರ ಭಕ್ತ ಕನಕದಾಸರ ಜಯಂತಿಯನ್ನು ಆಚರಿಸಲಾಯಿತು. ಮುಖ್ಯ ಶಿಕ್ಷಕ ಬಿ.ಎಂ. ಕುಂಬಾರ, ಸಹಶಿಕ್ಷಕಿ ಎಚ್.ಡಿ. ನಿಂಗರೆಡ್ಡಿ ಕನಕದಾಸರ ಕುರಿತು ಮಾತನಾಡಿದರು. ಈ ಸಂದರ್ಭದಲ್ಲಿ ಶಿಕ್ಷಕರು, ಸಿಬ್ಬಂದಿಗಳು ಮತ್ತು ಮಕ್ಕಳು ಇದ್ದರು.



ಬೆಟಗೇರಿಯ ಮಹಾರಾಣಾ ಪ್ರತಾಪ ಸಿಂಹ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ದಾಸವರೇಣ್ಯ ಭಕ್ತ ಕನಕದಾಸರ ಜಯಂತಿಯನ್ನು ಆಚರಿಸಲಾಯಿತು. ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ಗಣೇಶಸಿಂಗ ಬ್ಯಾಳಿ ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಪ್ರಭಾರ ಮುಖ್ಯಾಧ್ಯಾಪಕ ಎಚ್.ಎಸ್. ಬ್ಯಾಳಿ, ಪ್ರಾಚಾರ್ಯ ಎಸ್.ಎಂ. ಉಳ್ಳಾಗಡ್ಡಿ, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಇಷ್ಟಲಿಂಗ ದೀಕ್ಷೆ ಕಾರ್ಯಕ್ರಮ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಬಸವದಳದ 1671ನೇ ಶರಣ ಸಂಗಮ ಕಾರ್ಯಕ್ರಮವು ನ.9ರಂದು ಬೆಳಿಗ್ಗೆ 8 ಗಂಟೆಗೆ ಕಳಸಾಪೂರ ಮುಖ್ಯ ರಸ್ತೆಯ ನಂದೀಶ್ವರ ನಗರದ ಶರಣ ಶಿವಯೋಗಿ ಅಗಡಿ ಅವರ ನಿವಾಸದಲ್ಲಿ ನಡೆಯಲಿದ್ದು, ಲಿಂಗಾಯತ ಧರ್ಮದ ಸಂಸ್ಕಾರಗಳ ಕುರಿತು ಉಪನ್ಯಾಸ ಹಾಗೂ ಇಷ್ಟಲಿಂಗ ದೀಕ್ಷೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಪೂಜ್ಯಶ್ರೀ ಮ.ನಿ.ಪ್ರ. ಡಾ. ಮಹಾಂತಬಸವಲಿಂಗ ಸ್ವಾಮಿಗಳು, ಶ್ರೀ ಗುರು ಬಸವೇಶ್ವರ ಮಠ, ಬೇಲೂರು ಇವರು ಸಾನ್ನಿಧ್ಯ ವಹಿಸುವರು. ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ಎಸ್.ಎ. ಮುಗದ ಉಪನ್ಯಾಸ ನೀಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಶಿವಲೀಲಾ ಶಿವಯೋಗಿ ಅಗಡಿ ಹಾಗೂ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಟಿಎಂಸಿಯ ಸಂಸದ ಕಲ್ಯಾಣ್ ಬ್ಯಾನರ್ಜಿ ಖಾತೆಯಿಂದ 56 ಲಕ್ಷ ರೂ. ದೋಚಿದ ಸೈಬರ್ ವಂಚಕರು

■ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ತೃಣಮೂಲ ಕಾಂಗ್ರೆಸ್ ಸಂಸದ ಕಲ್ಯಾಣ್ ಬ್ಯಾನರ್ಜಿ ಸೈಬರ್ ವಂಚನೆಗೆ ಒಳಗಾಗಿದ್ದಾರೆ. ಅವರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (ಎಸ್‌ಬಿಐ) ಖಾತೆಯಿಂದ ಸೈಬರ್ ವಂಚಕರು 56 ಲಕ್ಷ ರೂ. ದೋಚಿದ್ದಾರೆ.

ಇದಕ್ಕೆ ಸಂಬಂಧಿಸಿದಂತೆ ಕೋಲ್ಕತ್ತಾದ ಎಸ್‌ಬಿಐ ಬ್ಯಾಂಕ್ ಅಧಿಕಾರಿಗಳು ಕೋಲ್ಕತಾದ ಸೈಬರ್ ಕ್ರೈಮ್ ವಿಭಾಗಕ್ಕೆ ದೂರು ನೀಡಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.

2002-2006ರ ನಡುವೆ ಬ್ಯಾನರ್ಜಿ ಅಸನ್ಸೋಲ್ ದಕ್ಷಿಣ ಕ್ಷೇತ್ರದ ಶಾಸಕರಾಗಿದ್ದರು. ಈ ಸಂದರ್ಭ ಅವರು ಎಸ್‌ಬಿಐನ ವಿಧಾನಸಭೆ ಉಪಶಾಖೆಯಲ್ಲಿ ಖಾತೆಗಳನ್ನು ತೆರೆದಿದ್ದರು. ಬ್ಯಾನರ್ಜಿ ಅವರ ಶಾಸಕ ಭತ್ಯೆಯನ್ನು ಈ ಖಾತೆಯಲ್ಲಿ ಜಮಾ ಮಾಡಲಾಗಿತ್ತು.

ಈಗ ಶ್ರೀರಾಂಪೋರ್ ಸಂಸದರಾಗಿರುವ ಬ್ಯಾನರ್ಜಿ ಅವರ ಈ ಹಳೆಯ ಖಾತೆಯಲ್ಲಿ ಬಹಳ ದಿನಗಳಿಂದ ಯಾವುದೇ ವಹಿವಾಟು ನಡೆದಿಲ್ಲ. ಇದನ್ನು ಬ್ಯಾಂಕ್ ನಿಷ್ಕ್ರಿಯ ಖಾತೆ ಎಂದು ಪರಿಗಣಿಸಿದೆ. ವಂಚಕರು ವಂಚನೆ ನಡೆಸಲು ಈ ಖಾತೆಯನ್ನು ಬಳಸಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ.

ಸೈಬರ್ ವಂಚಕರು ಸಂಸದ ಬ್ಯಾನರ್ಜಿ ಅವರ ಪ್ಯಾನ್ ಮತ್ತು ಆಧಾರ್ ಕಾರ್ಡ್‌ಗಳ ನಕಲಿ ಪ್ರತಿಗಳನ್ನು ಸೃಷ್ಟಿಸಿ ಬ್ಯಾಂಕ್ ಖಾತೆಯ ಕೈವೈಸಿಯನ್ನು ನವೀಕರಿಸಿದ್ದಾರೆ. ಇದರ ಜೊತೆಗೆ ನೋಂದಾಯಿತ ಮೊಬೈಲ್ ಸಂಖ್ಯೆಯನ್ನು ಬದಲಾಯಿಸಿದ್ದಾರೆ. ಇದಾದ ಬಳಿಕ ವಂಚಕರು ಇಂಟರ್‌ನೆಟ್ ಬ್ಯಾಂಕಿಂಗ್ ಮೂಲಕ ಹಲವಾರು ಅಧಿಕೃತ ವಹಿವಾಟುಗಳನ್ನು ನಡೆಸಿ ಇಲ್ಲಿಯವರೆಗೆ ಅವರ ಖಾತೆಯಿಂದ ಒಟ್ಟು 56 ಲಕ್ಷ ರೂ. ದೋಚಿದ್ದಾರೆ ಎಂದು ತಿಳಿದು ಬಂದಿದೆ.

# ಮಾನವ ಸೇವೆಯ ನಿರೂಪಕಿ ಸಿಸ್ಟರ್ ನಿವೇದಿತಾ

ಈ ಹೆಸರು ಕೇಳುವುದೇ ಒಂದು ರೋಮಾಂಚನ. ತಮ್ಮ ಜೀವನವನ್ನು ಭಾರತಮಾತೆಯ ಸೇವೆಗೆ ಅರ್ಪಿಸಿದ ಸಂಸ್ಕಾರದ ಒಡತಿ. ವಿದೇಶಿ ಮೂಲದವರಾದರೂ ಭಾರತೀಯ ಸಂಸ್ಕೃತಿಯನ್ನು ಬಹುವಾಗಿ ಆರಾಧಿಸಿದ, ಗೌರವಿಸಿದ, ಸೇವೆಯಲ್ಲಿ ಸಂತೃಪ್ತಿಯನ್ನು ಕಂಡ ತ್ಯಾಗಮಯಿ ವನಿತೆ. ರಾಷ್ಟ್ರಭಕ್ತಿ, ಸಂಸ್ಕೃತಿಯ ಜಾಗೃತಿ, ಸ್ವಾತಂತ್ರ್ಯ ಚಳುವಳಿಗೆ ಪ್ರೋತ್ಸಾಹ ನೀಡಿದ ರೀತಿ, ನಮ್ಮ ದೇಶದ ಕಲೆ, ಸಾಹಿತ್ಯ, ಸಂಸ್ಕೃತಿಗೆ ತಮ್ಮದೇ ಆದ ಕೊಡುಗೆ ನೀಡಿದ ನಿಸ್ವಾರ್ಥಿ. ದುರ್ಬಲರ ಬಡವರ ಅನಾಥರ ಮಹಿಳೆಯರ ಸೇವೆಗೆ ಸದಾ ಸಿದ್ಧವಾಗಿದ್ದ, ಮತ್ತೊಬ್ಬರಿಗೆ ಪ್ರೇರಣೆ ನೀಡಿದ್ದ ಮಾನವ ಸೇವೆಗೆ ಅರ್ಥ ನೀಡಿದ ಸಿಸ್ಟರ್ ನಿವೇದಿತಾ.

ಅದೊಂದು ಅಪರೂಪದ ಸಂದರ್ಭ, ಸ್ವಾಮಿ ವಿವೇಕಾನಂದರು ಲಂಡನ್‌ಗೆ ಭೇಟಿ ನೀಡಿದಾಗ ಅಲ್ಲಿ ನಡೆದ ಅವರ ಉಪನ್ಯಾಸವನ್ನು ಕೇಳಿ ಮಾರ್ಗರೇಟ್ (ನಿವೇದಿತಾ ಅವರ ಮೂಲ ಹೆಸರು) ಅವರು ತಮ್ಮ ಇಡೀ ಜೀವನದ ದಿಕ್ಕನ್ನೇ ಬದಲಾಯಿಸಿಕೊಂಡ ಆಧ್ಯಾತ್ಮದ ಚಿಂತಕಿ. ಅಲ್ಲಿಂದ ಮಾರ್ಗರೇಟ್ ಅವರು ಸ್ವಾಮಿ ವಿವೇಕಾನಂದರ ಜೊತೆಗೆ ಭಾರತದ ಸಂಸ್ಕೃತಿಯ ವಿಚಾರವಾಗಿ, ಮಾನವತೆಯ ಕುರಿತ ವಿಚಾರಧಾರೆಗಳನ್ನು ಅರಿತು ಅವುಗಳಿಂದ ಪ್ರೇರಿತರಾಗಿ ತಮ್ಮ ಇಡೀ ಜೀವನವನ್ನು ಹೆಮ್ಮೆಯ ಭಾರತದ ಸೇವೆಗೆ ಅರ್ಪಿಸಲು ನಿರ್ಧರಿಸಿದ ಸಂದರ್ಭವದು. ಮೂಲತಹ ಒಬ್ಬ ಸಾಮಾಜಿಕ ಕಾರ್ಯಕರ್ತೆಯಾಗಿ, ಲೇಖಕಿಯಾಗಿ, ಶಿಕ್ಷಕಿಯಾಗಿ ಸೇವೆ ಸಲ್ಲಿಸಿದ ಅನುಭವ ಅವರದು. ವಿವೇಕಾನಂದರ ಪ್ರೇರಣಾದಾಯಕ ವಿಚಾರಧಾರೆಗಳನ್ನು ಕೇಳಿದ ನಂತರ ಭಾರತದ ಅಧ್ಯಾತ್ಮವನ್ನು ಅರಸಿ ಬಂದ ಐರ್ಲೆಂಡ್ ದೇಶದ ಧೀಮಂತ ಮಹಿಳೆ.

ಬಾಲ್ಯದಿಂದಲೂ ಮಾರ್ಗರೇಟ್ ಆಧ್ಯಾತ್ಮಿಕತೆಯಲ್ಲಿ ಹೆಚ್ಚು ಒಲವನ್ನು ಹೊಂದಿದವರು. ಅವರ ಕೌಟುಂಬಿಕ ಹಿನ್ನೆಲೆಯೂ ಸಾಮಾಜಿಕ ಕೆಲಸ ಕಾರ್ಯಗಳಲ್ಲಿ ಕೊಡುಗೆ ನೀಡಿದ ಕುಟುಂಬವಾಗಿತ್ತು. ಹಾಗಾಗಿ ಬಾಲ್ಯದಿಂದಲೇ ದೈವಭಕ್ತಿ, ರಾಷ್ಟ್ರಭಕ್ತಿ ಎರಡೂ ಅವರಲ್ಲಿ ಸಮ್ಮಿಳಿತವಾಗಿತ್ತು.

ಸ್ವಾಮಿ ವಿವೇಕಾನಂದರ ದರ್ಶನದ ನಂತರದಲ್ಲಿ ಅವರ ದಿವ್ಯ ವಾಣಿಗಳು ಗಂಭೀರವಾದ ಚಹರೆ, ಉಜ್ವಲವಾದ ಮಾತುಗಳು ಮಾರ್ಗರೇಟ್ ಅವರಲ್ಲಿ ಚಿಂತನೆಯ ಬೆಳಕನ್ನು ಮೂಡಿಸಿದವು. ವಿವೇಕಾನಂದರನ್ನು ಗುರುವಿನ ಸ್ಥಾನದಿಂದ ನೋಡುತ್ತಿದ್ದ ಮಾರ್ಗರೇಟ್ ಸಮಾಜ ಸೇವೆಗಾಗಿ ಭಾರತಕ್ಕೆ ಬರುವ ತಮ್ಮ ಹಂಬಲವನ್ನು ವ್ಯಕ್ತಪಡಿಸಿದಾಗ ವಿವೇಕಾನಂದರು ಅಂದಿನ ಸಂದರ್ಭದಲ್ಲಿ ಭಾರತದ ಜನ ಜೀವನ ಕಷ್ಟಗಳ, ಸಮಸ್ಯೆಗಳ ಕುರಿತು ಮನವರಿಕೆ ಮಾಡಿದರು. ನನ್ನ ದೇಶದ ಮಾತೆಯರಿಗೆ ವಿದ್ಯಾಭ್ಯಾಸ ಕೊಡುವ ಅವಶ್ಯಕತೆ ಇದೆ. ಅದಕ್ಕೆ ಬೇಕಾದ ಎಲ್ಲ ಯೋಜನೆಗಳನ್ನು ಹಾಕಿಕೊಳ್ಳಬೇಕಾಗಿದೆ, ನೀನು ಒಬ್ಬ ಸಾಮಾಜಿಕ ಬದಲಾವಣೆಗೆ ತುಡಿತ ಇರುವ ಧೀಮಂತ ಮಹಿಳೆಯಾಗಿರುವುದರಿಂದ ಭಾರತಕ್ಕೆ ಬರಬಹುದು. ನಿನಗೆ ಬೇಕಾದ ಎಲ್ಲ



ಸಹಕಾರವನ್ನು ನಾವು ನೀಡುತ್ತೇವೆ ಎಂದು ಧೈರ್ಯದ ಮಾತುಗಳನ್ನು ತಿಳಿಸಿದಾಗ ಮಾರ್ಗರೇಟ್ ಸಂತಸಗೊಂಡರು. ಮಾರ್ಗರೇಟ್ ಭಾರತಕ್ಕೆ ಬಂದಾಗ ಭಾರತೀಯ ಸಂಸ್ಕೃತಿಯ ವಿಚಾರಧಾರೆಗಳನ್ನು ತಿಳಿಸಿ, ಬ್ರಹ್ಮಚರ್ಯ ದಿಕ್ಷೆಯನ್ನು ನೀಡಿ 'ನಿವೇದಿತಾ' ಎಂಬ ಹೆಸರನ್ನು ನೀಡಿದರು. ಅಂದಿನಿಂದ ಭಾರತದಲ್ಲಿ ತಮ್ಮ ಸಮಾಜಮುಖಿ ಕಾರ್ಯಗಳನ್ನು ಕೈಗೊಳ್ಳುತ್ತಾ ಸಿಸ್ಟರ್ ನಿವೇದಿತಾ ಎಂಬ ಹೆಸರಿನಿಂದ ಚಿರಪರಿಚಿತರಾದರು.

ಪ್ರಾರಂಭದಲ್ಲಿ ಶಿಕ್ಷಕಿಯಾಗಿ ಕಾರ್ಯನಿರ್ವಹಿಸುತ್ತಾ ಆಶ್ರಮವಾಸಿಗಳಿಗೆ ವೈಜ್ಞಾನಿಕ ಚಿಂತನೆಗಳನ್ನು ಮೂಡಿಸುವ ಶರೀರ ಶಾಸ್ತ್ರ, ಸಸ್ಯಶಾಸ್ತ್ರ ಮುಂತಾದ ಅಂಶಗಳ ಕುರಿತು ಬೋಧಿಸತೊಡಗಿದರು. ಮಹಿಳೆ ತನ್ನ ಜಾಣತನ, ತಾಳ್ಮೆ, ಸೇವಾ ಮನೋಭಾವದ ಜೊತೆ-ಗೆ ಆಧ್ಯಾತ್ಮಿಕವಾಗಿಯೂ ಪ್ರಗತಿ ಸಾಧಿಸಬಲ್ಲಳು ಎನ್ನುವ ಹಲವು ವಿಚಾರಗಳನ್ನು ತಮ್ಮ ಸಂದೇಶದ ಮೂಲಕ ತೋರಿಸಿದ ಪ್ರತ್ಯಕ್ಷ ಮಹಿಳೆ ನಿವೇದಿತಾ.

ನಿವೇದಿತಾ ಅವರು ಎಷ್ಟೇ ಕೆಲಸ-ಕಾರ್ಯಗಳಿದ್ದರೂ ಧ್ಯಾನ-ಪ್ರಾರ್ಥನೆಗಳಿಗೆ ಬಿಡುವು ಮಾಡಿಕೊಳ್ಳುತ್ತಿದ್ದರು. ಭಾರತೀಯ ಸ್ತ್ರೀಯರು ಮೂಢನಂಬಿಕೆಗಳಿಂದ ಆಚೆ ಬರುವಲ್ಲಿ, ಸಾಕ್ಷರರಾಗುವಲ್ಲಿ, ಅಜ್ಞಾನಗಳನ್ನು ತೊಡೆದು ಹಾಕುವಲ್ಲಿ, ಕರ್ತವ್ಯಪ್ರಜ್ಞೆ ಹೆಚ್ಚಿಸಿಕೊಳ್ಳುವಲ್ಲಿ ನಿವೇದಿತಾ ಅವರು ಪ್ರೇರಣೆ ನೀಡಿದ್ದರು.

ಕಲ್ಕತ್ತಾ ನಗರದಲ್ಲಿ ಪ್ಲೇಗ್ ಎನ್ನುವ ಮಹಾಮಾರಿ ಹರಡಿದಾಗ ಸೇವಾ ಮನೋಭಾವನೆ ಇದ್ದ ಇವರು ಸ್ವತಃ ತಾವೇ ಎಲ್ಲರ ಮನಮುಟ್ಟುವಂತೆ ಪ್ರೇರಣೆಯಾಗುವ ರೀತಿಯಲ್ಲಿ ಸ್ವಯಂಸೇವಕರಾಗಿ ಕೆಲಸ ಮಾಡಿದ ರೀತಿ ಇಂದಿಗೂ ಮಾದರಿಯಾಗಿದೆ. ಹೀಗೆ ಹಲವು ಆಯಾಮಗಳಲ್ಲಿ ಭಾರತದಲ್ಲಿ ಕಾರ್ಯನಿರ್ವಹಿಸಿದ ನಿವೇದಿತಾ ಅವರು ಭಾರತದಾದ್ಯಂತ ಪ್ರವಾಸ ಕೈಗೊಂಡು ಭಾರತದ ಜನರ ಹೃದಯದ ತುಡಿತವನ್ನು ಅರ್ಥ ಮಾಡಿಕೊಂಡ ಹೃದಯವಂತೆ.

ಹಿಂದೂ ಧರ್ಮದ ಬಗ್ಗೆ ಅಪಾರವಾದ ಸ್ಪಷ್ಟತೆ ಇವರಿಗಿತ್ತು. ಸ್ವಾಮಿ ವಿವೇಕಾನಂದರ ಕೃಪೆಯಂತೆ ಆಧ್ಯಾತ್ಮಿಕ ಜೀವನದ ಹಲವು ಸಿದ್ಧಿಗಳನ್ನು ಇವರು ಪಡೆದುಕೊಂಡಿದ್ದರು. ಶಾರದಾದೇವಿ ಅವರನ್ನು ಭೇಟಿಯಾದಾಗ ಅವರು ತೋರಿದ ನಿಷ್ಕಳಂಕ ಪ್ರೀತಿ, ವಾತ್ಸಲ್ಯ, ಮಧುರವಾದ ಮಾತುಗಳು, ಇವರ ಜೊತೆಗೂಡಿ ಕಳೆದ ಕ್ಷಣಗಳು ಎಲ್ಲವೂ ನಿವೇದಿತಾ ಅವರ ಮನಸ್ಸಿನಲ್ಲಿ ಹಿಂದೂ ಮಾತೆಯರ ಬಗ್ಗೆ ಸ್ಪಷ್ಟ ಚಿತ್ರಣ ಮೂಡಿಸಿತ್ತು. ಭಾರತದ ಉದ್ದಗಲಕ್ಕೂ ಸಂಚರಿಸಿ ಇಲ್ಲಿಯ ಜನ ಜೀವನದ ಚಿತ್ರಣಗಳನ್ನು ಅರಿತುಕೊಂಡು ಹಲವು ಪ್ರಮುಖ ಕೃತಿಗಳನ್ನು ಬರೆದ ಕೀರ್ತಿ ನಿವೇದಿತಾ ಅವರಿಗೆ ಸಲ್ಲುತ್ತದೆ.

ಭಾರತೀಯ ಮಹಿಳೆಯರಲ್ಲಿ ಅವರು ಕಂಡ ಹಲವು ಮೌಲ್ಯಗಳು ನಿಜಕ್ಕೂ ಅವರಲ್ಲಿ ಸಂತೃಪ್ತಿಯ ಭಾವವನ್ನು ಮೂಡಿಸಿತ್ತು. ಮನೆಯ ನಂದಾದೀಪವಾಗಿ ಗೃಹಿಣಿ ತನ್ನ ತ್ಯಾಗ, ಸಹನೆ, ಪ್ರೀತಿ, ಜವಾಬ್ದಾರಿ ನಿರ್ವಹಿಸುವ ರೀತಿ ಎಲ್ಲವೂ ಕುಟುಂಬದ, ಸಮಾಜದ ಮಕ್ಕಳ ವ್ಯಕ್ತಿತ್ವ ವಿಕಾಸದ ಉನ್ನತಿಯಲ್ಲಿ ಬಹುದೊಡ್ಡ ಪಾತ್ರ ವಹಿಸುತ್ತದೆ ಎನ್ನುವ ಅಭಿಪ್ರಾಯ ನಿವೇದಿತಾ ಅವರದಾಗಿತ್ತು.

ವಿವೇಕಾನಂದರು ಇಹಲೋಕವನ್ನು ತ್ಯಾಗ ಮಾಡಿದಾಗ ತಾಯಿಯನ್ನು ಕಳೆದುಕೊಂಡ ತಬ್ಬಲಿಯಂತೆ ಅನಾಥ ಪ್ರಜ್ಞೆಯನ್ನು ಅನುಭವಿಸಿ ವಿವೇಕಾನಂದರು ತಮಗೆ ನೀಡಿದ ಸೇವಾ ಕಾರ್ಯಗಳನ್ನು ಅತ್ಯಂತ ಶ್ರದ್ಧೆಯಿಂದ ನಿರ್ವಹಿಸಿ ಹಿಂದೂ ಮಹಿಳೆಯರ ಉನ್ನತಿಗೆ ಶ್ರಮಿಸಿದರು. ಹೀಗೆ ಸಿಸ್ಟರ್ ನಿವೇದಿತಾ ಭಾರತ ಮಾತೆಯ ಸೇವೆಯಲ್ಲಿ ಸಂತೃಪ್ತಿಯನ್ನು ಕಂಡವರು. ಇಂತಹ ಧೀಮಂತ ಮಹಿಳೆ ನಮ್ಮೆಲ್ಲರಿಗೂ ಸ್ಫೂರ್ತಿ ಹಾಗೂ ಅವರ ಎಲ್ಲಾ ಸಮಾಜಪರ ಸೇವಾ ಕಾರ್ಯಗಳು ನಮ್ಮೆಲ್ಲರ ಬದು-ಕಿಗೆ ಅನ್ವಯವಾದರೆ ನವ ಸಮಾಜದ ನಿರ್ಮಾಣದಲ್ಲಿ ನಮ್ಮದೂ ಒಂದಿಷ್ಟು ಸೇವೆಯಾಗಬಹುದು.



– ಸುಧಾ ಹುಚ್ಚಣ್ಣವರ.
ಉಪನ್ಯಾಸಕರು, ಗದಗ.

## ಪುಣೆ ಭೂ ಹಗರಣ: ಅಜಿತ್ ಪವಾರ್ ಪುತ್ರ ಪಾರ್ಥ್ ಸಂಸ್ಥೆಗೆ ನೋಟಿಸ್; ದಂಡ ಪಾವತಿಸುವಂತೆ ಕಂದಾಯ ಇಲಾಖೆ ಸೂಚನೆ



■ವಿಜಯಸಾಕ್ಷಿ ಸುದ್ದಿ, ಮುಂಬೈ

ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರ ಪುತ್ರ ಪಾರ್ಥ್ ಪವಾರ್ ಭಾಗಿಯಾಗಿದ್ದಾರೆ ಎಂದು ಹೇಳಲಾದ ಪುಣೆ ಭೂ ಹಗರಣದಲ್ಲಿ ಹೊಸ ಬೆಳವಣಿಗೆ ಬೆಳಕಿಗೆ ಬಂದಿದೆ. ಪಾರ್ಥ್‌ಗೆ ಸಂಬಂಧಿಸಿದ ಅಮೀಡಿಯಾ ಎಲ್‌ಎಲ್‌ಪಿ ಕಂಪನಿಗೆ ರಾಜ್ಯ ಸ್ಟ್ಯಾಂಪ್ ಡ್ಯೂಟಿ ಇಲಾಖೆ ನೋಟಿಸ್ ಜಾರಿ ಮಾಡಿದ್ದು, ಸುಮಾರು 43 ಕೋಟಿ ರೂ. ಬಾಕಿ ಮತ್ತು ದಂಡ ಪಾವತಿಸುವಂತೆ ಒತ್ತಾಯಿಸಿದೆ.

ಈ ವಿವಾದ ರಾಜಕೀಯ ಬಿರುಗಾಳಿಯನ್ನು ಹುಟ್ಟುಹಾಕಿದ್ದು, ತನಿಖೆಯಲ್ಲಿ ಸಂಪೂರ್ಣ ಸಹಕಾರ ಮತ್ತು ಪಾರದರ್ಶಕತೆ ಕಾಪಾಡಿಕೊಳ್ಳಲಾಗುವುದು ಎಂದು ಅಜಿತ್ ಪವಾರ್ ಸಾರ್ವಜನಿಕವಾಗಿ ಭರವಸೆ ನೀಡಿದ್ದಾರೆ.

ಆಪಾದಿತ ಭೂ ಹಗರಣ ಪುಣೆಯ ಕೋರೆಗಾಂವ್ ಪಾರ್ಕ್‌ನಲ್ಲಿರುವ ಸುಮಾರು 1,800 ಕೋಟಿ ಮೌಲ್ಯದ 40 ಎಕರೆ ಸರ್ಕಾರಿ ಸ್ವಾಮ್ಯದ ಜಮೀನನ್ನು ಕೇವಲ 300 ಕೋಟಿಗೆ ಮಾರಾಟ ಮಾಡಲಾಗಿದೆ ಎಂದು ವರದಿಗಳು ಬಂದ ನಂತರ ಕಂಪನಿಯ ಹೆಸರು ಹೊರಬಿದ್ದಿದೆ. 21 ಕೋಟಿ ಸ್ಟ್ಯಾಂಪ್ ಡ್ಯೂಟಿಯನ್ನು ಕೇವಲ 500ಕ್ಕೆ ದಾಖಲಿಸಲಾಗಿದೆ ಎಂದು ಆರೋಪಿಸಲಾಯಿತು. ಇದು ಕಂಪನಿ ಪ್ರತಿನಿಧಿಗಳು ಮತ್ತು ಸರ್ಕಾರಿ ಅಧಿಕಾರಿಗಳ ನಡುವಿನ ವಂಚನೆ ಹಾಗೂ ಒಪ್ಪಂದದ ಅನುಮಾನಗಳನ್ನು ಹುಟ್ಟುಹಾಕಿತು.

ಪಾರದರ್ಶಕ ತನಿಖೆಗೆ ಒತ್ತಾಯಿಸಿದ ಅಜಿತ್ ಪವಾರ್ ವಿವಾದದ ಬಗ್ಗೆ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿ ಅಜಿತ್ ಪವಾರ್, ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರೊಂದಿಗೆ ವೈಯಕ್ತಿಕವಾಗಿ ಮಾತನಾಡಿದ್ದು, ನ್ಯಾಯಯುತ ಮತ್ತು ಪಾರದರ್ಶಕ ತನಿಖೆಗೆ ವಿನಂತಿಸಿದ್ದೇನೆ ಎಂದು ಹೇಳಿದ್ದಾರೆ.

"ಈ ಪ್ರಕರಣವು ನನ್ನ ಕುಟುಂಬಕ್ಕೆ ಸಂಬಂಧಿಸಿದೆಯಾದರೂ, ನಿಯಮಗಳ ಪ್ರಕಾರ ಕಟ್ಟುನಿಟ್ಟಾಗಿ ಕಾರ್ಯನಿರ್ವಹಿಸಲು ನಾನು ಮುಖ್ಯಮಂತ್ರಿಗೆ ಹೇಳಿದ್ದೇನೆ. ಈ ವಿಷಯದಲ್ಲಿ ನಾವು ಸಂಪೂರ್ಣವಾಗಿ ಸಹಕರಿಸುತ್ತೇವೆ. ಆರೋಪಗಳನ್ನು ಮಾಡುವುದು ಸುಲಭ, ಆದರೆ ಸತ್ಯವನ್ನು ಜನರ ಮುಂದೆ ಬಹಿರಂಗಪಡಿಸಬೇಕು" ಎಂದು ಪವಾರ್ ಹೇಳಿದರು.

ಒಪ್ಪಂದದಲ್ಲಿ ಯಾವುದೇ ಹಣಕಾಸಿನ ವಹಿವಾಟು ನಡೆದಿಲ್ಲ ಎಂದು ಪ್ರಾಥಮಿಕ ಸಂಶೋಧನೆಗಳು ಬಹಿರಂಗಪಡಿಸಿವೆ ಎಂದು ಅವರು ಸ್ಪಷ್ಟಪಡಿಸಿದರು. "ಎಲ್ಲ ಸಂಬಂಧಿತ ದಾಖಲೆಗಳನ್ನು ರದ್ದುಗೊಳಿಸಲಾಯಿತು, ವಹಿವಾಟುಗಳನ್ನು ರದ್ದುಗೊಳಿಸಲಾಯಿತು" ಎಂದು ಹೇಳಿದರು.

ಉನ್ನತ ಮಟ್ಟದ ತನಿಖೆಗೆ ಆದೇಶಿಸಿದ ಫಡ್ನವೀಸ್ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಪ್ರಕರಣವನ್ನು 'ಪ್ರಾಥಮಿಕವಾಗಿ ಗಂಭೀರ' ಎಂದು ಹೇಳಿದ್ದಾರೆ.

## ಸವಾರಿ ಸಮಯದಲ್ಲಿ ಕಾಲು ಹಿಡಿಯಲು ಪ್ರಯತ್ನಿಸಿದ ರಾಪಿಡೋ ಚಾಲಕ: ಯುವತಿ ಆರೋಪ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಗುರುವಾರ ಸಂಜೆ ಸವಾರಿ ಮಾಡುವಾಗ ರಾಪಿಡೋ ಬೈಕ್ ಟ್ಯಾಕ್ಸಿ ಚಾಲಕನೊಬ್ಬ ತನ್ನನ್ನು ಅನುಚಿತವಾಗಿ ಸ್ಪರ್ಶಿಸಿದನೆಂದು ಬೆಂಗಳೂರಿನ ಯುವತಿಯೊಬ್ಬರು ಆರೋಪಿಸಿದ್ದಾರೆ.

ನವೆಂಬರ್ 6 ರಂದು ನಡೆದಿರುವುದಾಗಿ ವರದಿಯಾಗಿರುವ ಈ ಘಟನೆಯು, ಅವರು ವೀಡಿಯೊವನ್ನು ಹಂಚಿಕೊಂಡಿದ್ದಾರೆ. ಇನ್‌ಸ್ಟಾಗ್ರಾಮ್‌ನಲ್ಲಿ ತಮ್ಮ ಅನುಭವವನ್ನು ವಿವರಿಸಿದ ನಂತರ ಸಾರ್ವಜನಿಕ ಗಮನಕ್ಕೆ ಬಂದಿತು. ಅವರ ಪೋಸ್ಟ್‌ಗೆ ಬೆಂಗಳೂರು ನಗರ ಪೊಲೀಸರು ಮತ್ತು ರಾಪಿಡೋ ಸಂಸ್ಥೆ ಪ್ರತಿಕ್ರಿಯೆ ನೀಡಿದೆ. ಪ್ರಸ್ತುತ, ಅವರು ತಮ್ಮ ಸಾರ್ವಜನಿಕ ಪೋಸ್ಟ್‌ನಲ್ಲಿ ಕಾಮೆಂಟ್‌ಗಳನ್ನು ನಿಷ್ಕ್ರಿಯಗೊಳಿಸಿದ್ದಾರೆ.

ಚರ್ಚ್ ಸ್ಟ್ರೀಟ್‌ನಿಂದ ರಾಪಿಡೋ ಬೈಕ್ ಬುಕ್ ಮಾಡಿದ್ದರಿಂದ, ಚಾಲಕ ಸವಾರಿ ಮಾಡುವಾಗ ಅನುಚಿತವಾಗಿ ಸ್ಪರ್ಶಿಸಿದ್ದಾನೆ ಎಂದು ಆರೋಪಿಸಿದ್ದಾರೆ. ತಾನು ಉಳಿದುಕೊಂಡಿದ್ದ ಪೇಯಿಂಗ್ ಗೆಸ್ಟ್‌ಗೆ ಮರಳಲು ಚರ್ಚ್ ಸ್ಟ್ರೀಟ್‌ನಿಂದ ರಾಪಿಡೋ ಸವಾರಿಯನ್ನು ಬುಕ್ ಮಾಡಿದ್ದೇನೆ ಎಂದು ಮಹಿಳೆ ಹೇಳಿದ್ದಾರೆ.




"ಎಚ್ಚರಿಕೆ: ಕಿರುಕುಳ ಇಂದು, 06.11.2025, ಬೆಂಗಳೂರಿನಲ್ಲಿ, ನಾನು ಎಂದಿಗೂ ಯೋಚಿಸದದ್ದನ್ನು ಎದುರಿಸಿದೆ. ರಾಪಿಡೋ ಸವಾರಿಯಲ್ಲಿ ಚರ್ಚ್ ಸ್ಟ್ರೀಟ್‌ನಿಂದ ನನ್ನ ಪಿಜಿಗೆ ಹಿಂತಿರುಗುವಾಗ, ಕ್ಯಾಪ್ಟನ್ ಸವಾರಿ ಮಾಡುವಾಗ ನನ್ನ ಕಾಲುಗಳನ್ನು ಹಿಡಿಯಲು ಪ್ರಯತ್ನಿಸಿದರು. ಅದು ಇದ್ದಕ್ಕಿದ್ದಂತೆ ಸಂಭವಿಸಿತು, ಅದನ್ನು ಪ್ರಕ್ರಿಯೆಗೊಳಿಸಲು ಸಹ ನನಗೆ ಸಾಧ್ಯವಾಗಲಿಲ್ಲ, ಅದನ್ನು ರೆಕಾರ್ಡ್ ಮಾಡುವುದು ಬಿಡಿ" ಎಂದು ಅವರು ತಮ್ಮ ಪೋಸ್ಟ್‌ನಲ್ಲಿ ಬರೆದಿದ್ದಾರೆ.

"ಅವನು ಮತ್ತೆ ಹಾಗೆ ಮಾಡಿದಾಗ, ನಾನು ಅವನಿಗೆ, 'ಅಣ್ಣ, ಏನು ಮಾಡ್ತಾ ಇದ್ದೀರಾ? ನಿಲ್ಲಿಸಿ' ಎಂದು ಹೇಳಿದೆ. ಆದರೆ, ಅವನು ನಿಲ್ಲಿಸಲಿಲ್ಲ, ನನಗೆ ಭಯವಾಯಿತು. ನಾನು ಈ ಸ್ಥಳಕ್ಕೆ ಹೊಸಬಳು ಮತ್ತು ನಾನು ಎಲ್ಲಿದ್ದೇನೆಂದು ತಿಳಿದಿರದ ಕಾರಣ ನಾನು ಅವನನ್ನು ಬೈಕ್ ನಿಲ್ಲಿಸಲು ಕೇಳಲು ಸಾಧ್ಯವಾಗಲಿಲ್ಲ. ಪಿಜಿ ತಲುಪುವ ಹೊತ್ತಿಗೆ ನಾನು ನಡುಗುತ್ತಿದ್ದೆ, ಕಣ್ಣೀರು ಸುರಿಸುತ್ತಿದ್ದೆ" ಎಂದು ಬರೆದುಕೊಂಡಿದ್ದಾರೆ.

ಅವರ ಪ್ರಕಾರ, ಹತ್ತಿರದ ವ್ಯಕ್ತಿಯೊಬ್ಬರು ಆಕೆಯ ಸಂಕಟವನ್ನು ಗಮನಿಸಿ ಸಹಾಯಕ್ಕೆ ಬಂದರು.

### ಭೂ ಮಾಲೀಕನ ದಬ್ಬಾಳಿಕೆ ಖಂಡಿಸಿ ಸ್ಲಂ ಸಮಿತಿಯಿಂದ ನ.11ಕ್ಕೆ ಜಿಲ್ಲಾಧಿಕಾರಿಗಳ ಕಚೇರಿಯೆದುರು ಪ್ರತಿಭಟನೆ

# ಬಡವರ ಭೂಮಿಯನ್ನು ಕಬಳಿಸುವ ಹುನ್ನಾರ



ಮೋಹನ ಭಜಂತ್ರಿ ವಕೀಲರು ಮಾತನಾಡಿ, ನವನಗರ ಪ್ರದೇಶದಲ್ಲಿ ನೂರಾರು ಬಡ ಕುಟುಂಬಗಳು ತಮ್ಮ ಸ್ವಂತ ಮನೆಯ ಕನಸು ಕಾಣುತ್ತ, ಚಿಕ್ಕ ಮನೆಗಳಲ್ಲಿ ಜೀವನ ನಡೆಸುತ್ತ ಬಂದಿದ್ದಾರೆ. ಸುಮಾರು 25 ವರ್ಷಗಳ ಹಿಂದೆ ಭೂ ಮಾಲೀಕನಿಂದ ಆಗಿನ ಮಾರುಕಟ್ಟೆ ಬೆಲೆ ನೀಡಿ ನಿವೇಶನಗಳನ್ನು ಖರೀದಿ ಮಾಡಿದ್ದಾರೆ. ಈಗ ಸುಮಾರು 3 ವರ್ಷಗಳಿಂದ ಪ್ರಧಾನ ಮಂತ್ರಿಗಳ ಆವಾಸ್ ಯೋಜನೆಡಿಯಲ್ಲಿ ಮನೆಗಳನ್ನು ನಿರ್ಮಿಸಿಕೊಳ್ಳುತ್ತಿದ್ದಾರೆ. ಆದರೆ ಭೂ ಮಾಲೀಕ ದಬ್ಬಾಳಿಕೆ ನಡೆಸುತ್ತಿದ್ದು, ಇದನ್ನು ಖಂಡಿಸಿ ಹಮ್ಮಿಕೊಂಡಿರುವ ಹೋರಾಟದಲ್ಲಿ ಎಲ್ಲರೂ ಭಾಗವಹಿಸಿ ಭೂ ಮಾಲೀಕನ ದೌರ್ಜನ್ಯವನು ಖಂಡಿಸಬೇಕೆಂದು ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ರಹಮತನಗರದ ಹತ್ತಿರವಿರುವ ನವನಗರ ಸ್ಲಂ ಪ್ರದೇಶ ರಿ.ಸ.ನಂ: 594ರಲ್ಲಿ ಸುಮಾರು 78 ಬಡ ಕೂಲಿ ಕಾರ್ಮಿಕ ಕುಟುಂಬಗಳು ಭೂ ಮಾಲೀಕರಿಂದ ನಿವೇಶನಗಳನ್ನು ಖರೀದಿ ಮಾಡಿದ್ದಾರೆ. ಈಗ ಸ್ಥಳೀಯ ಕುಟುಂಬಗಳು ಸರ್ಕಾರದ ವಿವಿಧ ಯೋಜನೆಗಳಲ್ಲಿ ಮನೆಗಳನು ನಿರ್ಮಿಸಿಕೊಂಡು ವಾಸಿಸುತ್ತಿದ್ದಾರೆ. ಆದರೆ ಭೂ ಮಾಲೀಕ ಇಲ್ಲಿಯ ಕುಟುಂಬಗಳಿಗೆ ನಿವೇಶನಗಳನ್ನು ಬಿಟ್ಟುಕೊಡದೇ ಜನರ ಮೇಲೆ ದಬ್ಬಾಳಿಕೆ ನಡೆಸುತ್ತಿರುವುದನ್ನು ಖಂಡಿಸಿ ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಮಿತಿಯ ಸಹಕಾರದಲ್ಲಿ ಹಾಗೂ ಗದಗ ಜಿಲ್ಲಾ ಸ್ಲಂ ಸಮಿತಿ ನೇತೃತ್ವದಲ್ಲಿ ನ. 11ರಂದು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ತಿಳಿಸಿದರು.

ನವನಗರ ಸ್ಲಂ ಪ್ರದೇಶದಲ್ಲಿ ಸಾರ್ವಜನಿಕರ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿ, ಸುಮಾರು 25 ವರ್ಷಗಳಿಂದ ನವನಗರ ಪ್ರದೇಶದ ಜನರು ತಮ್ಮ ನಿವೇಶನಗಳನ್ನು ಬಿಟ್ಟುಕೊಡಬೇಕೆಂದು ಭೂ ಮಾಲೀಕನಿಗೆ ಹೇಳುತ್ತಾ ಬಂದಿದ್ದರೂ, ಬಡವರ ಭೂಮಿಯನ್ನು ಕಬಳಿಸುವ ಉದ್ದೇಶದಿಂದ ಪದೇ-ಪದೇ ಜನರ ಮೇಲೆ ದಬ್ಬಾಳಿಕೆ ನಡೆಸುತ್ತಿರುವುದು ಖಂಡನೀಯ ಎಂದರು.

ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ, ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೆಹಬೂಬಸಾಬ ಬಳ್ಳಾರಿ, ವೆಂಕಟೇಶ ಬಿಂಕದಕಟ್ಟಿ, ಸೈಯದಅಲ್ತಾಫ ರಾಣೆಬೆನ್ನೂರ, ಶರಣಪ್ಪ ಸೂಡಿ, ಸಲೀಂ ಹರಿಹರ, ಖಾಜಾಸಾಬ ಇಸ್ಮಾಯಿಲನವರ, ಮೌಲಾಸಾಬ ಗಚ್ಚಿ, ಬಸವರಾಜ ಕಳಸದ, ಶೇಖಪ್ಪ ಶೆಗಣಿ, ಮೆಹಬೂಬ ಮುಲ್ಲಾ, ಗೌಸಸಾಬ ಅಕ್ಕಿ, ರಿಜ್ವಾನ ಮುಲ್ಲಾ, ರಫೀಕ ಬರದೂರ, ನಾರಾಯಣ ಅಂಜಿಖಾನೆ, ಖಾಜಾಸಾಬ ಉಮಚಗಿ, ಯಾಸೀನ ನದಾಫ್, ಮೋಮಿನ ಶೇಖ, ಕಸ್ತೂರಿ ಹಳ್ಳಿ, ಮೆಹಬೂಬ ಹುಯಿಲಗೋಳ, ದಾದಾಪೀರ ನರಗುಂದ, ಜಂದಿಸಾಬ ಢಾಲಾಯತ, ಅಶೋಕ ಗುಮಾಸ್ತೆ, ಹಜರತಅಲಿ ಹಾವೇರಿ, ಗೌಸ ಉಮಚಗಿ, ಖಾಜಾಸಾಬ ಗಬ್ಬೂರ ಮುಂತಾದವರಿದ್ದರು.

## ಲೇಖಕರ ಸಮಸ್ಯೆ; ಸರ್ಕಾರ ಕಣ್ಣು ತೆರೆಯಲಿ

ಕನ್ನಡ ಚಲನಚಿತ್ರ ನಟ ಧ್ರುವ ಅವರ ಹುಟ್ಟುಹಬ್ಬದ ನಿಮಿತ್ತ ಹಾರ-ತುರಾಯಿಯ ಬದಲಿಗೆ ಅವರ ಅಭಿಮಾನಿಗಳು ಎರಡು ಲಕ್ಷಕ್ಕೂ ಅಧಿಕ ಪುಸ್ತಕಗಳ ಕಾಣಿಕೆ ನೀಡಿ ತಮ್ಮ ನಾಯಕ ನಟನ ಹುಟ್ಟುಹಬ್ಬವನ್ನು ವಿಭಿನ್ನವಾಗಿ ಆಚರಣೆ ಮಾಡಿದ್ದು ಸಂತಸದ ವಿಷಯ.

ಹಿಂದಿನ ಸರ್ಕಾರ ಅಧಿಕಾರಿಕ್ಕೆ ಬಂದ ಸಂದರ್ಭದಲ್ಲಿ ಅಂದಿನ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿಯವರು ತಮ್ಮ ಕಾರ್ಯಕರ್ತರಿಗೆ ಹಾಗೂ ಅಧಿಕಾರಿಗಳಿಗೆ ತಮಗೆ ಸನ್ಮಾನಿಸುವ ಸಂದರ್ಭದಲ್ಲಿ ಹಾರ-ತುರಾಯಿ ಬೇಡ, ಪುಸ್ತಕ ಕಾಣಿಕೆಯಾಗಿ ಕೊಟ್ಟರೆ ಸಾಕು ಎಂದು ಹೇಳಿದ್ದು ಇತಿಹಾಸ.

ಈಗಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಮಸಮಾಜದ ಕನಸುಗಾರರು, ಬಸವ ಪ್ರೇಮಿಗಳು, ವಿಶೇಷ ಅಧ್ಯಯನಶೀಲರೂ ಕೂಡ. ಸಿದ್ದರಾಮಯ್ಯ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲು ಪ್ರಗತಿಪರ ಚಿಂತಕರ, ಸಾಹಿತಿಗಳ ಪ್ರಮುಖ ಕಾರಣ ಕೂಡ ಇದೆ ಎಂಬುದು ಸರ್ವಕಾಲಿಕ ಸತ್ಯ.

ಆದರೆ, ಕರ್ನಾಟಕದ ಪ್ರತಿಯೊಬ್ಬ ನಾಗರಿಕರ ಹೆಸರಿನಲ್ಲಿ ಗ್ರಂಥಾಲಯ ಸೆಸ್ ವಸೂಲಿ ಮಾಡುತ್ತದೆ. 7 ಕೋಟಿ ಕನ್ನಡಿಗರ ಕರುನಾಡಿನಲ್ಲಿ ಒಬ್ಬ ಲೇಖಕನ ಒಂದು ಶೀರ್ಷಿಕೆಯ 300 ಪ್ರತಿಗಳನ್ನು ಏಕ ಗವಾಕ್ಷಿ ಯೋಜನೆ ಅಡಿಯಲ್ಲಿ ಖರೀದಿಸಲು ಏಕೆ ಮೀನಾಮೇಷ ಮಾಡುತ್ತಿದೆ ಎಂಬುದು ಯಕ್ಷ ಪ್ರಶ್ನೆಯಾಗಿದೆ. ಸಾವಿರ ಪ್ರತಿ ಪುಸ್ತಕ ಮುದ್ರಿಸಿ ನಾಲ್ಕಾರು ವರುಷ ಕಾದರೂ ಸರ್ಕಾರ ಲೇಖಕ-ಪ್ರಕಾಶಕರ ಸಮಸ್ಯೆ ಬಗೆಹರಿಸಲು ಮುಂದಾಗುತ್ತಿಲ್ಲ ಎಂಬುದು ನೋವಿನ ಸಂಗತಿ.

ಸರ್ಕಾರ ಮತ್ತು ಲೇಖಕ /ಪ್ರಕಾಶಕರ ನಡುವೆ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಆಯುಕ್ತರು ಸೇತುವೆಯಾಗಿ ಪ್ರತಿ ವರುಷ ಆಯಾ ವರುಷವೇ ಏಕ ಗವಾಕ್ಷಿ ಯೋಜನೆ ಅಡಿಯಲ್ಲಿ ಕನಿಷ್ಠ 500 ಪ್ರತಿ ಖರೀದಿಸಲು ಶಿಕ್ಷಣ ಮಂತ್ರಿಗಳು, ಮುಖ್ಯಮಂತ್ರಿಗಳು ಕ್ರಮ ಕೈಗೊಳ್ಳುವಂತಾಗಲಿ. ಸರ್ಕಾರದ ಯಾವುದೇ ಸಭೆ-ಸಮಾರಂಭಗಳಲ್ಲಿ ಹಾರ-ತುರಾಯಿ, ಸ್ಮರಣಿಕೆ ಜೊತೆಗೆ ಪುಸ್ತಕಗಳನ್ನು ಕಡ್ಡಾಯವಾಗಿ ಕಾಣಿಕೆ ನೀಡಲು ಅಧಿಕೃತ ಆದೇಶ ಮಾಡಲಿ.

ಚಲನಚಿತ್ರ ನಟ ಧ್ರುವ ಅವರು ಹಾಕಿಕೊಟ್ಟ ಹೊಸ ಪರಂಪರೆಗೆ ಸಾರ್ವಜನಿಕ ರಂಗದಲ್ಲಿ ಗುರುತಿಸಿಕೊಂಡಿರುವ ನಾಯಕರು, ಕಲಾವಿದರು, ಮಂತ್ರಿ ಮಹೋದಯರು ಅಳವಡಿಸಿಕೊಂಡಿದ್ದಾದರೆ ಹಳಿ ತಪ್ಪಿದ ಪುಸ್ತಕ ನೀತಿ ಸರಿ ದಾರಿಗೆ ಬರಬಹುದು! ಸಣ್ಣ ಪುಟ್ಟ ಲೇಖಕ-ಪ್ರಕಾಶಕರಿಗೆ ಉತ್ತೇಜನ ಸಿಗಬಲ್ಲದು. ಈ ದಿಸೆಯಲ್ಲಿ ಮಾನ್ಯ ಆಯುಕ್ತರು ಕ್ರಮ ಕೈಗೊಳ್ಳಲಿ.



–ಎ.ಎಸ್. ಮಕಾನದಾರ,
ಗದಗ.

ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ಸಾಧನೆಯ ಶತಮಾನೋತ್ಸವ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ತತ್ವತ್ರಯಗಳ ಪರಿಪಾಲನೆಯಿಂದ ಸುಖ ಪ್ರಾಪ್ತಿ

■ವಿಜಯಸಾಕ್ಷಿ ಸುದ್ದಿ, ಹರಿಹರ

ಭಾರತೀಯ ಆಧ್ಯಾತ್ಮ ಸಂಪತ್ತು ಅದ್ಭುತ. ಆರೋಗ್ಯಪೂರ್ಣ ಸಮಾಜ ನಿರ್ಮಾಣಕ್ಕೆ ಆಧ್ಯಾತ್ಮದ ಅರಿವು ಸಾಧನೆ ಮುಖ್ಯ. ವೀರಶೈವ ಧರ್ಮದ ತತ್ವತ್ರಯಗಳ ಪರಿಪಾಲನೆಯಿಂದ ಸುಖ, ಶಾಂತಿ ಪ್ರಾಪ್ತವಾಗುವುದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶನಿವಾರ ನಗರದ ಸಿದ್ಧೇಶ್ವರ ಪ್ಯಾಲೇಸ್ ಕಲ್ಯಾಣ ಮಂಟಪದಲ್ಲಿ ಶ್ರೀ ಮಹಾತಪಸ್ವಿ ಫೌಂಡೇಶನ್ ಸಂಯೋಜಿಸಿದ ಪರಮ ತಪಸ್ವಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳ ಸಾಧನೆಯ ಶತಮಾನೋತ್ಸವ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಪರಿಪಕ್ವ ಸಮಾಜ ನಿರ್ಮಾಣ ಕಾರ್ಯವೇ ನಿಜವಾದ ಧರ್ಮವೆಂದರಿತು ಬದುಕಿನ ಹಿರಿಮೆ ಮತ್ತು ರಹಸ್ಯ ಬೋಧಿಸಿ ಸನ್ಮಾರ್ಗಕ್ಕೆ ಕರೆತಂದ ಯುಗಪುರುಷರು ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳವರು. ಅಂತರಂಗ-ಬಹಿರಂಗ ಶುದ್ಧಿಯಿಂದ ಬದುಕಿಗೆ ಶ್ರೇಯಸ್ಸು ದೊರಕುವುದೆಂದು ನಿರಂತರ ಶ್ರಮಿಸಿದರು. ಶಿವಾಗಮಗಳ ಧರ್ಮ ಸಾಹಿತ್ಯವನ್ನು ಜನರ ಮನೆ ಮನಗಳಿಗೆ ತಲುಪಿಸಲು ಗಟ್ಟಿ ಹೆಜ್ಜೆಯನ್ನಿಟ್ಟವರು. ಜೀವನದ ಜಂಜಡಗಳಲ್ಲಿ ಸಿಲುಕಿರುವ ಮನುಷ್ಯನಿಗೆ ಆದರ್ಶ ಸಂಸ್ಕಾರ ಮತ್ತು ಸದ್ವಿಚಾರ ಬೋಧಿಸಿ ಅವರಲ್ಲಿ ಸ್ಫೂರ್ತಿ ಮತ್ತು ಚೈತನ್ಯ ಶಕ್ತಿಯನ್ನು ಹೆಚ್ಚಿಸಿದ ಪರಮ ವಿರಾಗಿ ತಪಸ್ವಿಗಳು.

ಮನುಷ್ಯನಲ್ಲಿ ದೈವೀ ಗುಣ, ಅಸುರೀ ಗುಣ ಎರಡೂ ಇವೆ. ಸಂಸಾರ ಸಾಗರದಿಂದ ಪಾರು ಮಾಡಿ ಸುಖ ಸಾಗರದತ್ತ ಕರೆದುಕೊಂಡು ಹೋಗುವ ಗುಣಗಳು ದೈವೀ ಗುಣಗಳು. ದುಃಖದ ಕಡಲಿನಲ್ಲಿ ಮುಳುಗಿಸಿಬಿಡುವ ಗುಣಗಳು ಅಸುರೀ ಗುಣಗಳಾಗಿವೆ. ದೈವೀ ಗುಣಗಳ ಸಂವರ್ಧನೆಗಾಗಿ ನಿತ್ಯ ಶ್ರಮಿಸಿ ಜಗದ ಜನರಿಗೆ ಶಾಂತಿ, ಸಾಮರಸ್ಯ, ಕ್ರಿಯಾಶೀಲ ವ್ಯಕ್ತಿತ್ವ ರೂಪಿಸಿದವರು ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳೆಂದು ಹರುಷ ವ್ಯಕ್ತಪಡಿಸಿದರು.



ಆಶಯ ನುಡಿಗಳನ್ನಾಡಿದ ಅವಧೂತ ಕವಿ ಗುರುರಾಜ ಗುರೂಜಿ ಮಾತನಾಡಿ, ಭಾರತೀಯ ಆಧ್ಯಾತ್ಮ ಸಂಪತ್ತನ್ನು ಹೆಚ್ಚಿಸಿದ ಕೀರ್ತಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳಿಗೆ ಸಲ್ಲುತ್ತದೆ. ಅಂಗ ಅವಗುಣಗಳನ್ನು ದೂರ ಮಾಡಿ ಲಿಂಗ ಗುಣ ಕರುಣಿಸಿದ ಕಾರುಣ್ಯ ಜ್ಯೋತಿ ಅವರು. ಉದಾತ್ತವಾದ ಜೀವನ ಮೌಲ್ಯಗಳನ್ನು ಪರಿಪಾಲಿಸಿ ಜನ ಸಮುದಾಯದ ಶ್ರೇಯಸ್ಸಿಗೆ ನಿರಂತರ ಕೃಷಿಗೈದವರು. ಹಸಿವೆ, ತೃಷೆಗಳನ್ನು ಮರೆತು ಭಕ್ತ ಸಂಕುಲದ ಒಳಿತಿಗಾಗಿ ತಪಗೈದ ಸಿದ್ಧಿ ಪುರುಷರ ಶತಮಾನೋತ್ಸವ ಆಚರಿಸುತ್ತಿರುವುದು ನಮ್ಮೆಲ್ಲರ ಸೌಭಾಗ್ಯವೆಂದ ಅವರು, ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳ ಶುಭಾಗಮನದೊಂದಿಗೆ ಸಮಾರಂಭ ನಡೆಯುತ್ತಿರುವುದು ನಮ್ಮೆಲ್ಲರ ಪೂರ್ವಾರ್ಜಿತ ಸುಕೃತವೆಂದು ಹರುಷ ವ್ಯಕ್ತಪಡಿಸಿದರು.

ಅವರಗೊಳ್ಳ ಹಿರೇಮಠದ ಓಂಕಾರ ಶಿವಾಚಾರ್ಯರು, ಕಣ್ವಕುಪ್ಪಿ ಗವಿಮಠದ ಡಾ.ನಾಲ್ವಡಿ ಶಾಂತಲಿಂಗ ಶಿವಾಚಾರ್ಯರು, ಹಂಪಸಾಗರ ನವಲಿ ಹಿರೇಮಠದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯರು, ಪುಣ್ಯಕೋಟಿ ಮಠದ ಜಗದೀಶ್ವರ ಸ್ವಾಮಿಗಳು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಪ್ರೊ. ಎಸ್.ಎಂ. ಗಂಗಾಧರಯ್ಯ ಮಹಾತಪಸ್ವಿ ಫೌಂಡೇಶನ್ ಸಾಧನೆಯ ಹತ್ತು ವರ್ಷದ ಅಭಿಯಾನದ ಸಮಗ್ರ ನೋಟ ಗ್ರಂಥವನ್ನು ಬಿಡುಗಡೆಗೊಳಿಸಿ ಮಾತನಾಡಿದರು. ದಾವಣಗೆರೆ ಅಶ್ವಿನಿ ಆಯುರ್ವೇದ ವಿಜ್ಞಾನ ನಿರ್ದೇಶಕ ಡಾ. ಯು.ಎಂ. ಜ್ಞಾನೇಶ್ವರ ಅವರಿಗೆ 'ಆಯುರ್ ತಪೋ ಜ್ಞಾನ ರತ್ನ' ಪ್ರಶಸ್ತಿಯನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಪ್ರದಾನ ಮಾಡಿ ಶುಭ ಹಾರೈಸಿದರು. ಸಮಾರಂಭದ ಅಧ್ಯಕ್ಷತೆಯನ್ನು ಮಹಾತಪಸ್ವಿ ಫೌಂಡೇಶನ್ ಉಪಾಧ್ಯಕ್ಷ ಪ್ರೊ. ಸಿ.ವಿ. ಪಾಟೀಲ ವಹಿಸಿದ್ದರು.

ಡಾ. ಹಾ.ಮಾ. ನಾಗಾರ್ಜುನ ಪ್ರಾಸ್ತಾವಿಕ ನುಡಿ ಸಲ್ಲಿಸಿದರು. ಮಹಾತಪಸ್ವಿ ಗುರುಕುಲ ಸಾಧಕರಿಂದ ವೇದಘೋಷ, ಸ್ಮೃತೀ ಶೆಲ್ಲಿಕೇರಿ ಮತ್ತು ಪರಮೇಶ್ವರ ಕತ್ತಿಗೆ ಸಂಗಡಿಗರಿಂದ ಭಕ್ತಿಗೀತೆ ಜರುಗಿತು. ಹುಬ್ಬಳ್ಳಿಯ ಆರಾಧನಾ ತಿರ್ಲಾಪುರ ಅವರಿಂದ ಭರತ ನಾಟ್ಯ ಜರುಗಿತು. ಐಶ್ವರ್ಯ ಸ್ವಾಗತಿಸಿದರು. ಪ್ರೊ. ಎ.ಎಂ. ರಾಜಶೇಖರಯ್ಯ, ಪಿ.ಬಿ. ಕೊಟ್ರೇಶಪ್ಪ ನಿರೂಪಿಸಿದರು.

> ಸಮಾರಂಭ ಉದ್ಘಾಟಿಸಿದ ಶಾಸಕ ಬಿ.ಪಿ. ಹರೀಶ ಮಾತನಾಡಿ, ಮನುಷ್ಯನು ಮಾನವತೆಯಿಂದ ದೈವತ್ವಕ್ಕೆ ಏರುವುದು ಅಷ್ಟು ಸುಲಭವಲ್ಲ. ಇದಕ್ಕೆಲ್ಲ ಶ್ರಮ ಪ್ರಯತ್ನ ಇರಬೇಕಾಗುತ್ತದೆ. ಆಧ್ಯಾತ್ಮ ಲೋಕದಲ್ಲಿ ಅನೇಕ ಆಧ್ಯಾತ್ಮಿಕ ವಿಭೂತಿ ಪುರುಷರನ್ನು ಇತಿಹಾಸದಲ್ಲಿ ಕಾಣುತ್ತೇವೆ. ಅಂಥಹ ಸಿದ್ಧಿ ಪುರುಷರಲ್ಲಿ ಅಗ್ರಸ್ಥಾನದಲ್ಲಿ ಲಿಂ.ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳನ್ನು ಕಾಣಬಹುದು. ಶಾಪಾನುಗ್ರಹ ಶಕ್ತಿ ಸಂಪಾದಿಸಿದರೂ ಯಾರಿಗೂ ಶಾಪ ಕೊಡಲಿಲ್ಲ. ಜನರ ತಾಪವನ್ನು ಪರಿಹರಿಸಿ ಸತ್ಪ್ರಜೆಗಳನ್ನಾಗಿ ಪರಿವರ್ತಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

# ದಾಸರಲ್ಲಿ ಶ್ರೇಷ್ಠರು ಕನಕದಾಸರು

▶▶ ಮೊದಲನೇ ಪುಟದಿಂದ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳ ಸ ಂ ಂ ಯ ು ಕ್ತಾ ಶ್ರ ಂ ಯ ದ ಲ್ಲಿ ಆಯೋಜಿಸಿದ್ದ ದಾಸಶ್ರೇಷ್ಠ ಶ್ರೀ ಕನಕದಾಸ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಸಮಾಜದ ಸೇವಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಶರಣು ಅಣ್ಣಿಗೇರಿ ಉಪನ್ಯಾಸ ನೀಡಿದರು. ಶಾಸಕರಾದ ಎನ್.ಎಚ್. ಕೋನರಡ್ಡಿ ಕಾರ್ಯಕ್ರಮದಲ್ಲಿ ಭಾಗವಹಿಸಿ, ಕನಕದಾಸರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಸಲ್ಲಿಸಿದರು.

ಹುಬ್ಬಳ್ಳಿ ಶಹರ ತಹಸೀಲ್ದಾರ ಮಹೇಶ ಗಸ್ತೆ, ಗ್ರಾಮೀಣ ತಹಸೀಲ್ದಾರ ಜೆ.ಬಿ. ಮಜ್ಜಗಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಆರ್.ವಾಯ್. ಹೊಸಮನಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ನಾಗರತ್ನಾ ಕ್ಯಾಸನೂರ, ಹುಬ್ಬಳ್ಳಿ ಶಹರ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಅಬ್ದುಲ್ ಬೋಲಾಬಾಯಿ, ಹುಬ್ಬಳ್ಳಿ ಶಹರ ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಂ. ಪಡ್ನೇಶಿ, ಹುಬ್ಬಳ್ಳಿ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ಉಮೇಶ ಬಮ್ಮಕ್ಕನವರ್, ಸಮಾಜದ ಮುಖಂಡರಾದ ಬಸವರಾಜ ಬೋರಣ್ಣವರ, ಮಂಜುನಾಥ ಗೊಜನೂರ, ವೀರನಾರಾಯ ಅರ್ಜಿ, ಈಶ್ವರ ಹೊಳೆಮನ್ನವರ, ಪಾರ್ವತಿ, ಆರ್.ಜಿ. ಮೇಟಿ, ಸಂಜೀವ ಧುಮಕ್ಕನಾಳ, ಶೋಭಾ ಬಳ್ಳಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ಭಕ್ತ ಕನಕದಾಸರು ಸಮಾಜ ಸುಧಾರಕರು

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಸಮ ಸಮಾಜ ನಿರ್ಮಾತೃ, ಸಮಾಜದ ಸುಧಾರಕ ಭಕ್ತ ಕನಕದಾಸರು ಎಂದು ಫಕ್ಕೀರಯ್ಯ ಅಮೋಘಿಮಠ ಹೇಳಿದರು.

ಅವರು ಪಟ್ಟಣದ ಪ.ಪಂ ಸಭಾಭವನದಲ್ಲಿ ಕನಕದಾಸರ 538ನೇ ಜಯಂತ್ಯುತ್ಸವದ ಅಂಗವಾಗಿ ಕನಕದಾಸರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಭಕ್ತ ಕನಕದಾಸರು ಇಲ್ಲಿ ಎಲ್ಲರೂ ಒಂದೇ ಕುಲದವರು, ಎಲ್ಲರೂ ಸಮಾನರು ಎಂದು ಸಮಾಜದ ಸುಧಾರಣೆಯಲ್ಲಿ ಮಹತ್ವದ ಪಾತ್ರವಹಿಸಿದರು ಎಂದರು.



ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ, ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ, ಉಪಾಧ್ಯಕ್ಷೆ ಅನುಸೂಯಾ ಸೋಮಗೇರಿ, ಪಾರವ್ವ ಅಳ್ಳಣ್ಣವರ, ನೀಲವ್ವ ಅಸುಂಡಿ, ಚಂಪಾವತಿ ಗುಳೇದ, ಕೆ.ಎಲ್. ಕರಿಗೌಡರ, ನಾಗರಾಜ ದೇಶಪಾಂಡೆ, ಬಸವರಾಜ ಸುಂಕಾಪೂರ, ಬಸವರಾಜ ಹಾರೋಗೇರಿ, ಎಂ.ಎನ್. ನಡಗೇರಿ, ಅಶೋಕ ಹುಣಶಿಮರದ, ವಾಣಿಶ್ರೀ ನಿರಂಜನ ಇದ್ದರು.

# ಬ್ರಾಹ್ಮಣ ಸಮಾಜ ಸರ್ವರ ಹಿತವನ್ನು ಬಯಸಿದೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬ್ರಾಹ್ಮಣರು ಸಮಾಜದಲ್ಲಿನ ಎಲ್ಲ ವರ್ಗಗಳ ಜನರಿಗೂ ಒಳಿತನ್ನು ಬಯಸುವವರಾಗಿದ್ದು, ಯಾವುದೇ ರೀತಿಯ ಸಮಾಜ ದ್ರೋಹಿ ಕಾರ್ಯಗಳನ್ನು ಮಾಡದೆ ಎಲ್ಲರ ಹಿತವನ್ನು ಬಯಸುವ ಸಮಾಜವಾಗಿದೆ ಎಂದು ಶ್ರೀರಾಮ ಸೇನಾ ಸಂಸ್ಥಾಪಕ ಪ್ರಮೋದ ಮುತಾಲಿಕ್ ಹೇಳಿದರು.

ಅವರು ಪಟ್ಟಣದ ಶ್ರೀ ಶಂಕರಭಾರತಿಮಠದಲ್ಲಿ ಶನಿವಾರ ಬ್ರಾಹ್ಮಣ ಸಮಾಜದ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಇಂದು ಸಮಾಜ ಕಟ್ಟುವಲ್ಲಿ ಬ್ರಾಹ್ಮಣ ಸಮಾಜ ನೀಡಿದ ಕೊಡುಗೆ ಅಪಾರವಾಗಿದೆ. ಇತ್ತೀಚಿನ ದಿನಗಳಲ್ಲಿ ಅನೇಕ ಸಮಾಜವಿರೋಧಿ ಚಟುವಟಿಕೆಗಳು ನಡೆಯುತ್ತಿವೆ. ಸಮಾಜದ ಪ್ರತಿಯೊಬ್ಬ ಪಾಲಕರು ತಮ್ಮ ತಮ್ಮ ಮಕ್ಕಳ ಕಡೆಗೆ ವಿಶೇಷ ಗಮನ ನೀಡುವದು ಅವಶ್ಯವಾಗಿದೆ. ಸಮಾಜದಲ್ಲಿ ನಡೆಯುತ್ತಿರುವ ಲವ್ ಜಿಹಾದ್, ಮತಾಂತರ ಇತ್ಯಾದಿಗಳನ್ನು ತಡೆಗಟ್ಟುವದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಹಿಂದೂ ಸಮಾಜವನ್ನು ದೇಶದಲ್ಲಿ ಉಳಿಯುವಂತೆ ಮಾಡಿದ್ದು ಆದಿ ಶಂಕರಾಚಾರ್ಯರು. ಅವರಿಂದಲೇ ಹಿಂದೂ ಧರ್ಮ ಬೆಳಗುವಂತಾಯಿತು. ಸಮಾಜ ಬಾಂಧವರು ಒಗ್ಗಟ್ಟಾಗಿ ಸಾಗಿದಾಗ ಎಂತಹುದೆ ಕಠಿಣ ಪರಿಸ್ಥಿತಿ ಬಂದರೂ ಎದುರಿಸಬಹುದು ಎಂದು ಹೇಳಿದರು.

ಬ್ರಹ್ಮವೃಂದದ ಅಧ್ಯಕ್ಷ ಗೋಪಾಲ ಪಡ್ನಿಸ್, ಸಮಾಜದ ಹಿರಿಯರಾದ ನಾರಾಯಣಭಟ್ ಪುರಾಣಿಕ, ಪ್ರಹ್ಲಾದ್‌ರಾವ್ ಕುಲಕರ್ಣಿ, ಕೆ.ಎಸ್. ಕುಲಕರ್ಣಿ, ತಾಲೂಕಾ ಬ್ರಾಹ್ಮಣ ಸಮಾಜದ ಅಧ್ಯಕ್ಷ ಕೃಷ್ಣ ಕುಲಕರ್ಣಿ, ಎಸ್.ಜಿ. ಹೊಂಬಳ, ಅರವಿಂದ ದೇಶಪಾಂಡೆ, ಅನಿಲ ಕುಲಕರ್ಣಿ, ರಾಘವೇಂದ್ರ ಪೂಜಾರ, ಡಿ.ಎಂ. ಪೂಜಾರ, ಡಾ. ಪ್ರಸನ್ನ ಕುಲಕರ್ಣಿ, ಬಿ.ಕೆ. ಕುಲಕರ್ಣಿ, ಅನಂತಭಟ್ ಪೂಜಾರ ಮುಂತಾದವರಿದ್ದರು.

# ತಹಸೀಲ್ದಾರರ ಕಚೇರಿಯಲ್ಲಿ ಕನಕದಾಸ ಜಯಂತಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ತಹಸೀಲ್ದಾರರ ಕಚೇರಿಯಲ್ಲಿ ಶನಿವಾರ ದಾಸ ಸಾಹಿತ್ಯದ ಮೇರು ಕವಿ, ದಾಸವರೇಣ್ಯ ಭಕ್ತ ಕನಕದಾಸರ 538ನೇ ಜಯಂತಿಯನ್ನು ಆಚರಿಸಲಾಯಿತು.

ಶಾಸಕ ಡಾ. ಚಂದ್ರು ಲಮಾಣಿ ಕನಕದಾಸರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಕನಕದಾಸರು ದಾರ್ಶನಿಕ ಕವಿ, ಆಧ್ಯಾತ್ಮಿಕ ಚಿಂತಕರಾಗಿದ್ದರು. ಎಲ್ಲದಕ್ಕೂ ಧರ್ಮವೇ ಕಾರಣ. ಕನಕದಾಸರು ನಡುಗನ್ನಡ ಸಾಹಿತ್ಯದ ಪ್ರಮುಖ ಕೀರ್ತನಕಾರರಾಗಿದ್ದರು. ಪುರಂದರ ದಾಸರೊಂದಿಗೆ ಕರ್ನಾಟಕ ಸಂಗೀತದ ಮೂಲ ಸಿದ್ಧಾಂತಗಳಿಗೆ ಎಂದೂ ಮರೆಯದ ಕಾಣಿಕೆ ನೀಡಿದ್ದಾರೆ. ಕನಕದಾಸರು ನಮ್ಮ ಪಕ್ಕದ ಜಿಲ್ಲೆ ಹಾವೇರಿ ಜಿಲ್ಲೆ ಬಾಡ ಗ್ರಾಮದವರು. ಕನ್ನಡ ನಾಡು ಎಂದೂ ಮರೆಯದ ಸಾಹಿತ್ಯವನ್ನು ಅವರು ಕೊಡುಗೆಯಾಗಿ ನೀಡಿದ್ದಾರೆ. ಅವರ ಹಾಡುಗಳಲ್ಲಿ ಭಕ್ತಿ ತುಂಬಿಕೊಂಡಿದೆ. ಅಖಂಡ ಭಕ್ತಿಯಿಂದ ಮಾತ್ರ ದೇವರ ಸಾಕ್ಷಾತ್ಕಾರ ಸಾಧ್ಯ ಎಂದು ಜಗತ್ತಿಗೆ ಸಾರಿದ್ದಾರೆ. ಅವರ ತತ್ವಾದರ್ಶಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳೋಣ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ನಿಂಗಪ್ಪ ಬನ್ನಿ, ವಿ.ಜಿ. ಪಡಿಗೇರಿ, ತಿಪ್ಪಣ್ಣ ಸಂಶಿ, ನೀಲಪ್ಪ ಪೂಜಾರ, ಶೇಕಣ್ಣ ಕಾಳೆ, ನೀಲಪ್ಪ ಶೆರಸೂರಿ ಸೇರಿದಂತೆ ಮತ್ತಿತರರು ಇದ್ದರು.

## ಬಿಹಾರ ಚುನಾವಣೆ : ರಸ್ತೆ ಬದಿ ಪತ್ತೆಯಾದ ವಿವಿಪ್ಯಾಟ್ ಸ್ಲಿಪ್‌ಗಳು

■ವಿಜಯಸಾಕ್ಷಿ ಸುದ್ದಿ, ಬಿಹಾರ

ಬಿಹಾರದ ಸಮಸ್ತಿಪುರ ಜಿಲ್ಲೆಯ ಶೀತಲ್‌ಪಟ್ಟಿ ಗ್ರಾಮದ ಎಸ್‌ಆರ್ ಕಾಲೇಜು ಬಳಿ ಭಾರೀ ಸಂಖ್ಯೆಯಲ್ಲಿ ವೋಟರ್ ವೆರಿಫೈಯಬಲ್ ಪೇಪರ್ ಆಡಿಟ್ ಟ್ರಯಲ್ (ವಿವಿ ಪ್ಯಾಟ್) ಸ್ಲಿಪ್‌ಗಳು ಪತ್ತೆಯಾಗಿದ್ದು, ಭಾರತೀಯ ಚುನಾವಣಾ ಆಯೋಗ (ಇಸಿಐ) ಶನಿವಾರ (ನ.8) ತನಿಖೆಗೆ ಆದೇಶಿಸಿದೆ.

## ನಿಧನ

### ಕಳಕಪ್ಪ ಬಸಪ್ಪ ಹತ್ತಿಕಟಗಿ



**ನರೇಗಲ್ಲ:** ಪಟ್ಟಣದ ಗುಡಿ ಓಣಿ ನಿವಾಸಿ, ಕುಡುವಕ್ಕಲಿಗ ಸಮಾಜದ ಹಿರಿಯರಾದ ಕಳಕಪ್ಪ ಬಸಪ್ಪ ಹತ್ತಿಕಟಗಿ (75) ಶನಿವಾರ ನಿಧನ ಹೊಂದಿದರು.

ಅವರಿಗೆ ಪತ್ನಿ, ನಾಲ್ವರು ಪುತರ್ರರು, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗವಿದೆ.

# ನಿಮ್ಮ ಹಕ್ಕುಗಳಿಗಾಗಿ ಹೋರಾಡುವುದು ತಪ್ಪಲ್ಲ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಮ್ಮ ನಡುವೆ ಇರುವ ಹಿರಿಯ ನಾಗರಿಕರು ಎಂದಿಗೂ ನೆಮ್ಮದಿಯಿಂದ ಬಾಳಬೇಕು ಎಂದು ಸರಕಾರ ಹಲವಾರು ಕಾನೂನುಗಳನ್ನು ಮಾಡಿದೆ. ಈ ಕಾನೂನುಗಳ ಬಗ್ಗೆ ನಿಮಗೆ ಅರಿವು ಮೂಡಿಸಲು ಕಾನೂನು ಅರಿವು-ನೆರವು ಮತ್ತು ನ್ಯಾಯಾಂಗ ಇಲಾಖೆಯ ವತಿಯಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ನಿಮಗಾಗಿ ಇರುವ ಕಾನೂನುಗಳನ್ನು ಸರಿಯಾಗಿ ತಿಳಿದುಕೊಂಡು ನೆಮ್ಮದಿಯ ಜೀವನ ಸಾಗಿಸಿ ಎಂದು ಪ್ರಾಧಿಕಾರದ ಹಿರಿಯ ನ್ಯಾಯವಾದಿ ಎಸ್. ಎಚ್. ಹಾದಿಮನಿ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಆಯೋಜಿಸಲಾಗಿದ್ದ ಹಿರಿಯ ನಾಗರಿಕರ ಸಭೆಯಲ್ಲಿ ಅವರು ಮಾತನಾಡಿದರು.

ಹಿರಿಯ ನಾಗರಿಕರಿಗೇನಾದರೂ ಅನ್ಯಾಯವಾದರೆ ಅವರಿಗೆ ಕಾನೂನಾತ್ಮಕ ಸಲಹೆ-ಸಹಕಾರ ನೀಡಲು ತಾಲೂಕಾ ಮಟ್ಟದಲ್ಲಿ, ಜಿಲ್ಲಾ ಮಟ್ಟದಲ್ಲಿ ಕಾನೂನು ಪ್ರಾಧಿಕಾರವಿದೆ. ಇದರ ಸದುಪಯೋಗವನ್ನು ಪಡೆದುಕೊಳ್ಳಬೇಕು. ನಿಮ್ಮ ಹಕ್ಕುಗಳಿಗಾಗಿ ನೀವು ಹೋರಾಡುವುದರಲ್ಲಿ ಯಾವುದೇ ತಪ್ಪಿಲಲ್ಲ. ಅದು ನ್ಯಾಯ ಸಮ್ಮತವಾಗಿರಬೇಕು. ಏನೇ ತೊಂದರೆಗಳಿದ್ದರೂ ಜಿಲ್ಲಾ ನ್ಯಾಯಾಧೀಶರೊಂದಿಗೆಯೂ ಚರ್ಚಿಸಬಹುದೆಂದರು.



ಠಾಣಾಧಿಕಾರಿ ಐಶ್ವರ್ಯ ನಾಗರಾಳ ಮಾತನಾಡಿ, ನ್ಯಾಯಾಂಗ ಮತ್ತು ಪೊಲೀಸ್ ಇಲಾಖೆಗಳು ಹಿರಿಯ ನಾಗರಿಕರ ಸಮಸ್ಯೆಗಳಿಗೆ ಎಂದಿಗೂ ಸ್ಪಂದಿಸುತ್ತವೆ. ನಿಮ್ಮ ಅಹವಾಲುಗಳು ಏನೇ ಇದ್ದರೂ ಅವುಗಳನ್ನು ಬಗೆಹರಿಸಲು ನಾವು ಪ್ರಾಮಾಣಿಕ ಪ್ರಯತ್ನ ಮಾಡುತ್ತೇವೆ. ನಮ್ಮನ್ನು ಮೀರಿದ ವಿಷಯಗಳು ಇದ್ದರೆ ಅವುಗಳನ್ನು ಕಾನೂನು ಪ್ರಾಧಿಕಾರದ, ನ್ಯಾಯಾಂಗ ಇಲಾಖೆಯ ಗಮನಕ್ಕೆ ತಂದು ಪರಿಹರಿಸಲು ಪ್ರಯತ್ನಿಸುತ್ತೇವೆ. ಇದಕ್ಕೆ ನಿಮ್ಮೆಲ್ಲರ ಸಹಕಾರ ಬೇಕೆಂದು ಕೋರಿದರು.

ಸಭೆಯಲ್ಲಿ ಅಧ್ಯಕ್ಷ ಡಿ.ಎ. ಅರವಟಗಿಮಠ, ಡಾ. ಆರ್. ಕೆ. ಗಚ್ಚಿನಮಠ, ಎಂ.ಎಸ್. ದಢೇಸೂರಮಠ, ವಿ.ವಿ. ಚೇಗರೆಡ್ಡಿ, ಸಂಗಮೇಶ ಹಲಬಾಗಿಲ, ಶಿವಯೋಗಿ ಜಕ್ಕಲಿ, ವಿ.ವಿ. ಕೆರಿಯವರ, ಜಿ.ಎ. ಬೆಲ್ಲದ, ಹೊಸಮನಿ, ಸುರೇಶ ಬಾಗಲಿ, ಗೋದಿ, ಎನ್.ಎಸ್. ಚಿಕ್ಕನಗೌಡ್ರ, ಎಸ್.ಬಿ. ಹಿರೇಮಠ, ಕೆ.ಎಸ್. ಕಳಕೊಣ್ಣವರ, ಕಾಶಪ್ಪ ಸಂಗನಾಳ, ಎಫ್.ಎಸ್. ಧರ್ಮಾಯತ, ಠಾಣಾ ಸಿಬ್ಬಂದಿ ಮತ್ತಿತರರು ಪಾಲ್ಗೊಂಡಿದ್ದರು.

## 'ಮತಗಳ್ಳತನ' ವಿರುದ್ಧ 1.12 ಕೋಟಿ ಸಹಿ ಸಂಗ್ರಹ, ನ.10ರಂದು ಎಐಸಿಸಿಗೆ ಹಸ್ತಾಂತರ : ಡಿ.ಕೆ ಶಿವಕುಮಾರ್



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯ ಹಾಗೂ ದೇಶದಲ್ಲಿ ನಡೆದಿರುವ ಮತಗಳ್ಳತನದ ವಿರುದ್ಧ ಎಐಸಿಸಿ ನಾಯಕರು ಹಮ್ಮಿಕೊಂಡಿರುವ ಸಹಿಸಂಗ್ರಹ ಅಭಿಯಾನದಲ್ಲಿ ಕರ್ನಾಟಕದಿಂದ 1,12,40,000 ಸಹಿಗಳನ್ನು ಸಂಗ್ರಹಿಸಲಾಗಿದೆ" ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಬೆಂಗಳೂರಿನ ಕೆಪಿಸಿಸಿ ಕಚೇರಿಯ ಭಾರತ ಜೋಡೋ ಭವನದಲ್ಲಿ ಶನಿವಾರ (ನ.8) ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, "ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳು ಹಾಗೂ ನಮ್ಮ ಪಕ್ಷ ರಾಜಕೀಯವಾಗಿ ವಿಭಾಗಿಸಿಕೊಂಡಿರುವ 40 ಜಿಲ್ಲೆಗಳಿಂದ ಸಹಿ ಸಂಗ್ರಹ ಮಾಡಲಾಗಿದೆ. ನಮ್ಮ ಕಾರ್ಯಕರ್ತರು ಬಹಳ ಪ್ರಾಮಾಣಿಕವಾಗಿ ಈ ಅಭಿಯಾನದಲ್ಲಿ ಕೆಲಸ ಮಾಡಿದ್ದಾರೆ. 8–10 ಕಡೆ ಹೊರತು ಪಡಿಸಿ, ಉಳಿದ ಎಲ್ಲಾ ಕಡೆಗಳಲ್ಲಿ ಚೆನ್ನಾಗಿ ಸಹಿ ಸಂಗ್ರಹಿಸಲಾಗಿದೆ. ಬೂತ್ ವಾರು ಸಹಿ ಸಂಗ್ರಹಿಸಲಾಗಿದ್ದು, ಜನರಲ್ಲಿ ಮತಗಳ್ಳತನದ ಬಗ್ಗೆ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದ್ದೇವೆ" ಎಂದು ತಿಳಿಸಿದರು.

ಸಹಿ ಸಂಗ್ರಹ ಅಭಿಯಾನವನ್ನು ಇಲ್ಲಿಗೆ ನಿಲ್ಲಿಸುವುದಿಲ್ಲ. ಈ ಅಭಿಯಾನ ಇನ್ನೂ ಆಗದ ಪ್ರದೇಶಗಳಲ್ಲಿ ಇನ್ನು 3–4 ದಿನ ಕಾಲಾವಕಾಶ ನೀಡಿ ಮುಂದುವರೆಸಲು ಸೂಚಿಸಲಾಗುವುದು.

### ಕಾಂಗ್ರೆಸ್ ಸರ್ಕಾರದ ವಿರುದ್ಧ ಶ್ರೀರಾಮ ಸೇನೆಯ ಸಂಸ್ಥಾಪಕ ಪ್ರಮೋದ ಮುತಾಲಿಕ್ ಆಕ್ರೋಶ


# ಆರ್‌ಎಸ್‌ಎಸ್‌ನ್ನು ಕೆಣಕಿದಷ್ಟು ಬಲಿಷ್ಠವಾಗುತ್ತದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆರ್‌ಎಸ್‌ಎಸ್ ನಿಷೇಧ ಮಾಡುವದು ಪ್ರಿಯಾಂಕ್ ಖರ್ಗೆ ಮತ್ತು ಅವರ ತಂದೆಯವರಿಂದ ಸಾಧ್ಯವಿಲ್ಲ. ಜನರ ಮನಸ್ಸಿನಲ್ಲಿ ಬೇರೂರಿರುವ ಆರ್‌ಎಸ್‌ಎಸ್ ಈಗಾಗಲೇ 2–3 ಬಾರಿ ನಿಷೇಧ ವಿಧಿಸಿದ್ದರೂ ಎಲ್ಲ ಕಂಟಕಗಳನ್ನು ದೂರ ಮಾಡಿಕೊಂಡು ಮತ್ತೆ ಎದ್ದು ನಿಂತಿದೆ. ಇದನ್ನು ನಿಷೇಧ ಮಾಡುವ ಹೇಳಿಕೆ ನೀಡುವುದು ಮೂರ್ಖತನ ಎಂದು ಶ್ರೀರಾಮ ಸೇನೆಯ ಸಂಸ್ಥಾಪಕ ಪ್ರಮೋದ ಮುತಾಲಿಕ್ ಅಕ್ರೋಶ ವ್ಯಕ್ತಪಡಿಸಿದರು.

ಅವರು ಪಟ್ಟಣದಲ್ಲಿ ಆರ್‌ಎಸ್‌ಎಸ್ ಕಾರ್ಯಕರ್ತ ಮುತ್ತು ಕರ್ಜೆಕಣ್ಣವರ ಅವರ ನಿವಾಸದಲ್ಲಿ ಶನಿವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ದೇಶ ಹೋಳು ಮತ್ತು ಹಾಳು ಮಾಡಿದ ಕಾಂಗ್ರೆಸ್‌ನಂತೆ ಆರ್‌ಎಸ್‌ಎಸ್ ಸಂಘಟನೆ ಅಲ್ಲ. ಆರ್‌ಎಸ್‌ಎಸ್ ಒಂದು ದೇಶಭಕ್ತ ಸಂಘಟನೆಯಾಗಿದೆ. ಆದ್ದರಿಂದಲೇ 100 ವರ್ಷಗಳಾದರೂ ಇನ್ನೂ ಸಹ ಅದರಲ್ಲಿ ಯಾವುದೇ ಒಡಕು ಕಂಡುಬಂದಿಲ್ಲ. ಲಕ್ಷಾಂತರ ಸ್ವಯಂ ಸೇವಕರ ಶ್ರಮದಿಂದ ಆರ್‌ಎಸ್‌ಎಸ್ ಬಲಿಷ್ಠವಾಗಿದೆ. ಇದನ್ನು ಸಚಿವ ಪ್ರಿಯಾಂಕ್ ಖರ್ಗೆ ಅರ್ಥ ಮಾಡಿಕೊಳ್ಳಬೇಕು ಎಂದು ಲೇವಡಿ ಮಾಡಿದರು.



ಆರ್‌ಎಸ್‌ಎಸ್ ಚಟುವಟಿಕೆಗಳಿಗೆ ಸರಕಾರಿ ಜಾಗೆ ಬೇಕೆಂದಿಲ್ಲ. ದೇಶದಲ್ಲಿ ಸಾಕಷ್ಟು ಜಾಗೆಗಳಿವೆ, ಅಲ್ಲಿ ಕಾರ್ಯಕ್ರಮ ನಡೆಸುತ್ತೇವೆ. ಯಾರು ತಡೆಯುತ್ತಾರೋ ನೋಡಿಕೊಳ್ಳುತ್ತೇವೆ. ಆರ್‌ಎಸ್‌ಎಸ್ ಅನ್ನು ಎಷ್ಟು ಕೆಣಕುತ್ತೀರೋ ಅಷ್ಟು ಪ್ರಬಲವಾಗಿ ಬೆಳೆಯುತ್ತದೆ. ಆರ್‌ಎಸ್‌ಎಸ್ ಜೊತೆ ಸಂಘರ್ಷಕ್ಕೆ ಇಳಿದರೆ ನೀವೇ ಹಿಂದೂ ದ್ರೋಹಿಗಳಾಗುತ್ತೀರಿ. ದಲಿತ ಸಂಘಟನೆಗಳು, ಭೀಮ ಆರ್ಮಿ ಎನ್ನುವ ಸಂಘಟನೆಗಳನ್ನು ಸಂಘರ್ಷಕ್ಕೆ ಇಳಿಯುವಂತೆ ಮಾಡುತ್ತಿದ್ದೀರಿ, ಇದನ್ನು ಜನರು ಕ್ಷಮಿಸುವದಿಲ್ಲ. ಯಾವುದೇ ಸರಕಾರಿ ಜಾಗೆಯಲ್ಲಿ ಕಾರ್ಯಕ್ರಮ ಮಾಡಬಾರದು ಎನ್ನುತ್ತೀರಿ. ಇದು ದೇಶದ ಹಿಂದೂಗಳ ಜಾಗೆ. ಇಲ್ಲಿ ಕಾರ್ಯಕ್ರಮ ಮಾಡಬಾರದು ಎನ್ನಲು ನೀವ್ಯಾರು ಎಂದು ಮುತಾಲಿಕ್ ಪ್ರಶ್ನಿಸಿದರು.

ಆರ್‌ಎಸ್‌ಎಸ್ ಬಗ್ಗೆ ಖರ್ಗೆಯವರು ನೀಡಿದ ಹೇಳಿಕೆಯನ್ನು ವಾಪಸ್ಸು ಪಡೆದು ಬಹಿರಂಗವಾಗಿ ಕ್ಷಮೆ ಯಾಚಿಸಬೇಕು ಎಂದು ಆಗ್ರಹಿಸಿದ ಪ್ರಮೋದ ಮುತಾಲಿಕ್, ಆರ್‌ಎಸ್‌ಎಸ್ ಯಾವುದೇ ರಾಜಕೀಯ ಸಂಘಟನೆಯಲ್ಲ. ಇದು ಪಕ್ಕಾ ದೇಶಭಕ್ತರ ಸಂಘಟನೆ. ಇದರಲ್ಲಿ ಎಲ್ಲ ಪಕ್ಷದವರೂ ಇದ್ದಾರೆ. ಮುಸ್ಲಿಮರು ಈ ಕಾಂಗ್ರೆಸ್‌ನಲ್ಲಿ ಹೊಕ್ಕು ಹಿಂದೂ ಸಂಘಟನೆ, ಒಗ್ಗಟ್ಟು ಒಡೆಯುವ ಕಾರ್ಯ ಮಾಡುತ್ತಿದ್ದಾರೆ. ಇದಕ್ಕೆ ಕಾಂಗ್ರೆಸ್ ಕುಮ್ಮಕ್ಕು ನೀಡುತ್ತಿದೆ. ನೆಹರುರವರು ದೇಶದ ಒಂದಿಂಚು ಜಾಗೆಯಲ್ಲಿಯೂ ಭಗವಾದ್ವಜ ಹಾರಾಡಲು ಅವಕಾಶ ನೀಡುವದಿಲ್ಲ ಎಂದು ಹೇಳಿದ್ದರು. ಇದೀಗ ನಮ್ಮ ಸನಾತನ ಧರ್ಮ ಸಂಕೇತದ ಭಗವಾದ್ವಜವನ್ನು ನಿಮ್ಮ ಮನೆಯ ಮೇಲೂ ಹಾರಿಸುತ್ತೇವೆ ಎಂದರು. ಹಿಂದೂ ಧರ್ಮದವರ ಹಬ್ಬಗಳ ಆಚರಣೆಗೆ ಸರಕಾರ ನೂರಾರು ಕರಾರುಗಳನ್ನು ಹಾಕುತ್ತಿದೆ. ಸುಪ್ರೀಂ ಕೋರ್ಟ್ ಆದೇಶದಂತೆ ಡಿಜೆ ಹಚ್ಚಬೇಡಿ ಎಂದು ಹೇಳುವ ಕಾಂಗ್ರೆಸ್, ಮುಸ್ಲಿಮರ ಪ್ರಾರ್ಥನೆಯನ್ನು ಮೊದಲು ತಡೆಯಿರಿ. ಇಲ್ಲದಿದ್ದಲ್ಲಿ ನಾವು ಡಿಜೆ ಹಚ್ಚುವದು ನಿಲ್ಲುವದಿಲ್ಲ ಮತ್ತು ಗಣೇಶನ ಹಬ್ಬಕ್ಕೆ ಅನುಮತಿಯನ್ನು ಸಹ ಮುಂದಿನ ವರ್ಷದಿಂದ ತೆಗೆದುಕೊಳ್ಳುವದಿಲ್ಲ ಎಂದು ತಮ್ಮ ನಿಲುವು ಸ್ಪಷ್ಟಪಡಿಸಿದರು.

ಈ ವೇಳೆ ಗದಗ ಜಿಲ್ಲಾ ಶ್ರೀರಾಮ ಸೇನೆ ಅಧ್ಯಕ್ಷ ಸೋಮು ಗುಡಿ, ರಾಜ್ಯ ಶಾರೀರಿಕ ಪ್ರಮುಖ ಹುಲಿಗೆಪ್ಪ ವಾಲ್ಮೀಕಿ, ಶಿವರಾಜ ಅಂಬಾರಿ, ಈರಣ್ಣ ಪೂಜಾರ, ಭರತ ಲದ್ದಿ, ಮಂಜು ಕಾಟ್ಕರ್, ಮುತ್ತು ಕರ್ಜೆಕಣ್ಣವರ, ಪ್ರಾಣೇಶ ವ್ಯಾಪಾರಿ, ಬಸವರಾಜ ಚಕ್ರಸಾಲಿ, ಬಸವರಾಜ ಗೌಡರ, ಅಮಿತ ಗುಡಗೇರಿ, ಹನುಮಂತ ರಾಮಗೇರಿ, ಚನ್ನಪ್ಪ ಹಾಳದೋಟದ, ಪವನ ಹಗರದ, ಪ್ರವೀಣ ಬನ್ನಿಕೊಪ್ಪ, ಮನೋಜ ತಂಡಿಗೇರ, ಅಕ್ಷಯ ಕುಮಸಿ ಮುಂತಾದವರಿದ್ದರು.

## ಅಲಗಿಲವಾಡ ಶಾಲೆಯಲ್ಲಿ ಕನಕದಾಸ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

ಶಿರಹಟ್ಟಿ ತಾಲೂಕಿನ ಅಲಗಿಲವಾಡ ಶಾಲೆಯಲ್ಲಿ ಭಕ್ತ ಕನಕದಾಸರ 539ನೇ ಜಯಂತ್ಯುತ್ಸವ ಆಯೋಜಿಸಲಾಗಿತ್ತು.

ಕನಕದಾಸರು ಕ್ರಿ.ಶ. 1487ರಲ್ಲಿ ಹಾವೇರಿ ಜಿಲ್ಲೆಯ ಶಿಗ್ಗಾಂವಿ ತಾಲೂಕಿನ ಬಾಡ ಗ್ರಾಮದಲ್ಲಿ ಜನಿಸಿದರು. ಅವರ ಮೂಲ ಹೆಸರು ತಿಮ್ಮಪ್ಪ ನಾಯಕ. ಅವರು ಬಾಲ್ಯದಲ್ಲಿಯೇ ತರ್ಕ, ವ್ಯಾಕರಣ ಮತ್ತು ಮೀಮಾಂಸೆಯಲ್ಲಿ ಪರಿಣತಿ ಸಾಧಿಸಿದರು. ಯುದ್ಧದಲ್ಲಿ ಗಾಯಗೊಂಡ ನಂತರ ಭಗವಾನ್ ಹರಿಯನ್ನು ಧ್ಯಾನಿಸಲು ಪ್ರಾರಂಭಿಸಿದರು. ಇದರಿಂದ ಸ್ಫೂರ್ತಿಗೊಂಡು, ಕನಕದಾಸರು ಹರಿಯ ಭಜನೆ ಮತ್ತು ಸಾಹಿತ್ಯ ರಚನೆಗೆ ತಮ್ಮನ್ನು ಸಮರ್ಪಿಸಿಕೊಂಡರು. ಇಂತಹ ದಾಸರ ಜಯಂತ್ಯುತ್ಸವ ಆಚರಣೆ ನಮ್ಮೆಲ್ಲರಿಗೂ ಹೆಮ್ಮೆಯಾಗಿದೆ ಎಂದು ಶಿಕ್ಷಕರು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಪ್ರೇಮಯ್ಯ ಬಾಳಿಹಳ್ಳಿಮಠ, ಪ್ರಧಾನ ಗುರುಗಳಾದ ಹಾಲೇಶ ಎಸ್.ಜಕ್ಕಲಿ, ಶಿಕ್ಷಕರಾದ ನೇಮೇಶ ಎನ್.ಯರಗುಪ್ಪಿ, ವಿದ್ಯಾರ್ಥಿಗಳು ಇದ್ದರು.

# ಕನಕದಾಸರು ಸಮಾಜ ಪರಿವರ್ತಕರು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಮ್ಮ ವಚನ ಮತ್ತು ಕೀರ್ತನೆಗಳ ಮೂಲಕ ಸಮಾಜದ ಒಳಿತು–ಕೆಡುಗಳನ್ನು ವಿಶ್ಲೇಷಿಸಿ ಜನರಿಗೆ ಸರಳವಾಗಿ ಅರ್ಥವಾಗುವ ರೀತಿಯಲ್ಲಿ ಜೀವನ ಸಂದೇಶ ನೀಡಿದ ದಾರ್ಶನಿಕರಲ್ಲಿ ಕನಕದಾಸರು ಸಮಾಜ ಪರಿವರ್ತಕರಾಗಿದ್ದಾರೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಶನಿವಾರ ಪುರಸಭೆ ಕಾರ್ಯಾಲಯದಲ್ಲಿ ಕನಕದಾಸರ ಜಯಂತಿ ಅಂಗವಾಗಿ ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು.



ಯಾವುದೇ ಒಂದು ಜಾತಿ, ಧರ್ಮ, ಪ್ರದೇಶ, ಭಾಷೆಗೆ ಸೀಮಿತವಾಗದ ಕನಕದಾಸರ ವಿಶ್ವ ಮಾನವ ಪರಿಕಲ್ಪನೆಯ ಸಂದೇಶಗಳು ಸಾರ್ವಕಾಲಿಕ ಪ್ರಸ್ತುತತೆಯನ್ನು ಪಡೆದಿದೆ. ಕನಕದಾಸರು ಸದಾ ಕ್ರಾಂತಿಕಾರರು ಹಾಗೂ ಸಮಾಜ ಸುಧಾರಕರಾಗಿದ್ದರು. ಕನಕ, ಬಸವ, ಬುದ್ಧ ಮುಂತಾದವರು ಎಲ್ಲಾ ಕಾಲಕ್ಕೂ ಸಲ್ಲುವವರು. ಇವರ ವಿಚಾರಗಳು ಕಾಲಾತೀತವಾಗಿದೆ ಎಂದು ಹೇಳಿದರು.

ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಮಾತನಾಡಿ, ಸಮಾಜದ ಎಲ್ಲಾ ಕಟ್ಟುಪಾಡುಗಳನ್ನು ತೊರೆದು ಜನರನ್ನು ಕೀರ್ತನೆಗಳ ಮೂಲಕ ಮನಃಪರಿವರ್ತನೆ ಮಾಡಿದ ಕನಕದಾಸರು ಒಬ್ಬ ಯುಗ ಪುರುಷರಾಗಿದ್ದಾರೆ. ಆಧುನಿಕ ಸಮಾಜಕ್ಕೆ ಕನಕದಾಸರ ತತ್ವ–ಸಂದೇಶಗಳ ಅವಶ್ಯಕತೆ ಇದೆ. ಭಕ್ತನ ಭಕ್ತಿ ದೇವರಿಗಿಂತ ದೊಡ್ಡದು. ದಾಸ ಶ್ರೇಷ್ಠರಲ್ಲಿಯೇ ಶ್ರೇಷ್ಠ ದಾಸರು ಕನಕದಾಸರು. ಅವರ ಆದರ್ಶ ಗುಣಗಳನ್ನು ಅಳವಡಿಸಿಕೊಂಡು ಅವರು ಹಾಕಿಕೊಟ್ಟ ಮಾರ್ಗದಲ್ಲಿ ಸಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ನಿಂಗಪ್ಪ ಬನ್ನಿ, ತಿಪ್ಪಣ್ಣ ಸಂಶಿ, ರಾಜು ಓಲೇಕಾರ, ಗಂಗಾಧರ ಮೆಣಸಿನಕಾಯಿ, ಬಸವಣ್ಣೆಪ್ಪ ನಂದೆಣ್ಣವರ, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಶೋಭಾ ಬೆಳ್ಳಿಕೊಪ್ಪ, ಮಂಜುನಾಥ ಮುದಗಲ್, ಹನುಮಂತ ನಂದೆಣ್ಣವರ, ಎಸ್.ಪಿ. ಲಿಂಬಯ್ಯನಮಠ, ಸುರೇಶ ಪೂಜಾರ, ವೆಂಕಟೇಶ ರಾಮಗಿರಿ, ಎಂ.ಎಸ್. ಹೆಬ್ಬಾಳ, ನೇತ್ರಾ ಹೊಸಮನಿ ಮತ್ತಿತರಿದ್ದರು.


## ಬಾಪೂಜಿ ಶಾಲೆಯಲ್ಲಿ ಕನಕದಾಸ ಜಯಂತಿ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ


ಸಮಾನತೆ, ಸಹೋದರತ್ವ, ದೈವಾನ್ವೇಷಣೆ ಮತ್ತು ದೈವದ ಜೊತೆ ಸಂವಾದದ ಮಾರ್ಗವನ್ನೂ ಬೋಧಿಸಿದ ವಿಶ್ವಚೇತನ, ದಾಸಶ್ರೇಷ್ಠ ಭಕ್ತ ಕನಕದಾಸರ 538ನೇ ಜಯಂತಿಯನ್ನು ಇಲ್ಲಿಯ ಲಕ್ಕುಂಡಿ ಗ್ರಾಮೀಣ ವಿದ್ಯಾವರ್ಧಕ ಸಂಸ್ಥೆಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

5ನೇ ತರಗತಿ ವಿದ್ಯಾರ್ಥಿ ಸಮರ್ಥ ಗರ್ಜಪ್ಪನವರ ಧರಿಸಿದ್ದ ಕನಕದಾಸರ ವೇಷ–ಭೂಷಣವು ಆಕರ್ಷಿಸಿತು. ವಿದ್ಯಾರ್ಥಿಗಳು ಕನಕದಾಸರ ಕೀರ್ತನೆಗಳನ್ನು ಹೇಳಿದರು. ಪ್ರಧಾನ ಗುರುಮಾತೆ ಆರ್.ಬಿ. ಬರದ್ವಾಡ, ಹಿರಿಯ ಶಿಕ್ಷಕ ಬಸವರಾಜ ಆಯ್.ಗರ್ಜಪ್ಪನವರ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ 1ರ ವ್ಯವಸ್ಥಾಪಕ ಶರಣಪ್ಪ ಗರ್ಜಪ್ಪನವರ, ರಫೀಯಾ ದಂಡಿನ, ಪಿ.ಬಿ. ಬರದ್ವಾಡ, ಎ.ಎಂ. ದಂಡಿನ, ಲಕ್ಷ್ಮೀ ಗರ್ಜಪ್ಪನವರ, ಅರ್ಜುನ ಛಲವಾದಿ, ಅಂಬುಜಾ ಕುಲಕರ್ಣಿ ಇದ್ದರು. ಗ್ರಾಮ ಪಂಚಾಯಿತಿ, ಬಾಲಕಿಯರ ಸರಕಾರಿ ಪ್ರೌಢಶಾಲೆ, ಸರಕಾರಿ ಪ್ರಾಥಮಿಕ ದ್ವಿಭಾಷಾ ಶಾಲೆ, ಸರಕಾರಿ ಹಿರಿಯ ಕನ್ನಡ ಹೆಣ್ಣುಮಕ್ಕಳ ಶಾಲೆ, ಸರಕಾರಿ ಪ್ರಾಥಮಿಕ ಉರ್ದು ಶಾಲೆ, ಸರಕಾರಿ ಕಿರಿಯ ಪ್ರಾಥಮಿಕ ಶಾಲೆ, ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಮಾರುತಿ ನಗರ, ಬಿ.ಎಚ್. ಪಾಟೀಲ ಪ್ರೌಢಶಾಲೆ, ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಕನಕದಾಸರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಜಯಂತಿಯನ್ನು ಆಚರಿಸಲಾಯಿತು.



ಲಕ್ಷ್ಮೇಶ್ವರದ ರೈತ ಸಂಕರ್ಪ ಕೇಂದ್ರದಲ್ಲಿ ಶನಿವಾರ ದಾಸಶ್ರೇಷ್ಠ ಕನಕದಾಸರ ಜಯಂತಿ ಆಚರಿಸಲಾಯಿತು. ರೈತ ಸಂಪರ್ಕ ಕೇಂದ್ರದ ಅಧಿಕಾರಿ ಚಂದ್ರಶೇಖರ ನರಸಮ್ಮನವರ ಕನಕದಾಸರು ಕನ್ನಡ ಸಾಹಿತ್ಯಕ್ಕೆ ನೀಡಿದ ಕೊಡುಗೆ ಕುರಿತು ಮಾತನಾಡಿದರು. ಈ ಸಂದರ್ಭದಲ್ಲಿ ರೈತ ಸಂಪರ್ಕ ಕೇಂದ್ರದ ಸಿಬ್ಬಂದಿಗಳು ಇದ್ದರು.

## ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ ಇಂದು



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಶಿಗ್ಲಿ ಗ್ರಾಮದ ಜಿ.ಎಸ್.ಎಸ್ ಶಾಲೆಯ ಆವರಣದಲ್ಲಿ ನ. 9ರಂದು ಮುಂಜಾನೆ 10 ಗಂಟೆಗೆ ಶ್ರೀ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಹೂವಿನಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ವಹಿಸಲಿದ್ದು, ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಯುವ ಮುಖಂಡ ಆನಂದಸ್ವಾಮಿ ಗಡ್ಡದೇವರಮಠ ಅವರು ಮಹರ್ಷಿ ವಾಲ್ಮೀಕಿಯವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಲಿದ್ದಾರೆ. ಶಿವಾನಂದ ತಳವಾರ (ಅಡರಕಟ್ಟಿ) ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಿಲ್ಲಾ ನಿವೃತ್ತ ನ್ಯಾಯಾಧೀಶ ಡಿ.ವಾಯ್. ಬಸಾಪೂರ, ಮಾಜಿ ಶಾಸಕರುಗಳಾದ ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಎಸ್.ಪಿ. ಬಳಿಗಾರ, ಸುನೀಲ ಮಹಾಂತಶೆಟ್ಟರ, ಎಸ್.ಎಂ. ರಾಗಿ, ಮಂಜುನಾಥ ನಾವಿ, ರವಿ ಕೊರಕನವರ, ಈಶ್ವರ ಪಶುಪತಿಹಾಳ, ಬಿ.ಎನ್. ರಾಟಿ, ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ನಾಗರಾಜ ಗಡಾದ, ಸಂಸ್ಥೆಯ ಅಧ್ಯಕ್ಷ ರಂಜನ್ ಪಾಟೀಲ, ರಾಮಣ್ಣ ಲಮಾಣಿ (ಶಿಗ್ಲಿ) ಮುಂತಾದವರು ಆಗಮಿಸಲಿದ್ದಾರೆ. ಕರ್ನಾಟಕ ಕಾಲೇಜಿನ ಪ್ರೊ. ಡಾ.ಶರಣ ಮುಷ್ಠಿಗೇರಿ ಉಪನ್ಯಾಸ ನೀಡಲಿದ್ದಾರೆ ಎಂದು ಸಂಘಟಕರು ತಿಳಿಸಿದ್ದಾರೆ.

## ಅಧಿಕಾರಿಗಳು ಸರಿಯಾಗಿ ಕರ್ತವ್ಯವನ್ನು ನಿರ್ವಹಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣಕ್ಕೆ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆಯಲ್ಲಿ ವಿಳಂಬ ಆಗುತ್ತಿರುವ ಕುರಿತು ದೂರುಗಳು ಬಂದ ಹಿನ್ನೆಲೆಯಲ್ಲಿ ಶನಿವಾರ ಶಾಸಕ ಡಾ. ಚಂದ್ರು ಲಮಾಣಿ ಅವರು ಲಕ್ಷ್ಮೇಶ್ವರದಲ್ಲಿ ಮೇಲ್ಮಟ್ಟದ ಜಲಾಗಾರ, ಹಾಗೂ ಎಲ್&ಟಿ ಪೈಪ್‌ಲೈನ್ ಅಳವಡಿಸಿರುವ ಸ್ಥಳಕ್ಕೆ ಅಧಿಕಾರಿಗಳೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಕುಡಿಯುವ ನೀರು ಪೂರೈಕೆಯಲ್ಲಿ ವಿಳಂಬ ಹಾಗೂ ಸಮಸ್ಯೆಗಳಾಗುತ್ತಿವೆ. ಈ ಬಗ್ಗೆ ಸಾಕಷ್ಟು ಜನರಿಂದ ದೂರುಗಳು ಬರುತ್ತಿವೆ. ನೀರು ಪೂರೈಕೆ ಆಗದ ಕಾರಣ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಅವರು ನೀರಿನ ಸಮಸ್ಯೆ ಕುರಿತು ನನ್ನ ಹತ್ತಿರ ದೂರು ತರುತ್ತಿದ್ದಾರೆ. ನೀರು ಪೂರೈಕೆಯಲಿ ತಾರತಮ್ಯವಾಗುತ್ತಿದೆ ಮತ್ತು ಅನೇಕರು ತಮ್ಮ ಪ್ರಭಾವ ಬಳಸಿಕೊಂಡು ಅನಧಿಕೃತವಾಗಿ ಡೈರೆಕ್ಟ್ ಲೈನ್‌ನಿಂದ ನಳ ಪಡೆದು ನಿರಂತರ ನೀರು ಪಡೆದುಕೊಳ್ಳುತ್ತಿದ್ದಾರೆ. ಇಂತಹ ನಳಗಳ ಸಂಪರ್ಕ ಕಡಿತಗೊಳಿಸಬೇಕು. ಈ ನಿಟ್ಟಿನಲ್ಲಿ ಅಧಿಕಾರಿಗಳು ಈ ಕುರಿತು ಸೂಕ್ತ ಕ್ರಮಕೈಗೊಳ್ಳಬೇಕು. ನೀರು ಪೂರೈಸುವ ಸಿಬ್ಬಂದಿ ಸಾರ್ವಜನಿಕರೊಂದಿಗೆ ಸೌಜನ್ಯದಿಂದ ವರ್ತಿಬೇಕು. ಇಲ್ಲದಿದ್ದರೆ ಅವರ ವಿರುದ್ಧ ಶಿಸ್ತು ಕ್ರಮಕೈಗೊಳ್ಳಲಾಗುವುದು. ಅಧಿಕಾರಿಗಳು ಮತ್ತು ಸಿಬ್ಬಂದಿ ಸರಿಯಾಗಿ ತಮ್ಮ ಕರ್ತವ್ಯವನ್ನು ಕಟ್ಟುನಿಟ್ಟಾಗಿ ಮಾಡಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಮಂಜುನಾಥ ಮುದಗಲ್ಲ, ಬಸವಣ್ಣೆಪ್ಪ ನಂದೆಣ್ಣವರ, ನಿಂಗಪ್ಪ ಬನ್ನಿ, ಹನಮಂತಪ್ಪ ನಂದೆಣ್ಣವರ ಮತ್ತಿತರರು ಇದ್ದರು.

# ಬಿಹಾರದಲ್ಲಿ ರಾಹುಲ್ ಗಾಂಧಿ 'ಅಂಗಡಿ' ಮುಚ್ಚಲಿದೆ: ಅಮಿತ್ ಶಾ

■ವಿಜಯಸಾಕ್ಷಿ ಸುದ್ದಿ, ಬಿಹಾರ

'ಚುನಾವಣೆಯಲ್ಲಿ 160 ಸ್ಥಾನಗಳನ್ನು ಗೆಲ್ಲುವ ಮೂಲಕ ಎನ್‌ಡಿಎ ಮೈತ್ರಿಕೂಟವು ಸರ್ಕಾರ ರಚಿಸಲಿದ್ದು, ಬಿಹಾರದಲ್ಲಿ ರಾಹುಲ್ ಗಾಂಧಿ ಅವರ 'ಅಂಗಡಿ' ಮುಚ್ಚಲಿದೆ' ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಶನಿವಾರ ಹೇಳಿದ್ದಾರೆ.

ಬಿಹಾರದ ಪುರ್ನಿಯಾದಲ್ಲಿ ನಡೆದ ಚುನಾವಣಾ ಯಾಲಿಯನ್ನುದ್ದೇಶಿಸಿ ಮಾತನಾಡಿದ ಅಮಿತ್ ಶಾ, ರಾಹುಲ್ ಗಾಂಧಿ ಮತ್ತು ಆರ್‌ಜೆಡಿ ನಾಯಕ ತೇಜಸ್ವಿ ಯಾದವ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ.



'ರಾಹುಲ್ ಗಾಂಧಿ ಮತ್ತು ತೇಜಸ್ವಿ ಯಾದವ್, ಬಿಹಾರದ ಸೀಮಾಂಚಲ ಪ್ರದೇಶವನ್ನು ನುಸುಳುಕೋರರ ತಾಣವನ್ನಾಗಿ ಪರಿವರ್ತಿಸಲು ಪಣ ತೊಟ್ಟಿದ್ದಾರೆ. ಆದರೆ, ನಾವು ಪ್ರತಿಯೊಬ್ಬ ನುಸುಳುಕೋರರನ್ನು ಪತ್ತೆಹಚ್ಚಿ, ಮತದಾರರ ಪಟ್ಟಿಯಿಂದ ಅವರ ಹೆಸರುಗಳನ್ನು ಅಳಿಸಿ ಹಾಕಿ ದೇಶದಿಂದ ಗಡೀಪಾರು ಮಾಡುತ್ತೇವೆ' ಎಂದಿದ್ದಾರೆ.

'ಬಿಹಾರದ ಮುಂದಿನ ಮುಖ್ಯಮಂತ್ರಿಯನ್ನು ನುಸುಳುಕೋರರು ನಿರ್ಧರಿಸಬಾರದು ಎಂದು ನೀವು ಬಯಸಿದರೆ, ಅವರನ್ನು ರಕ್ಷಿಸಲು ಯಾತ್ರೆ ಕೈಗೊಂಡ ಆರ್‌ಜೆಡಿ–ಕಾಂಗ್ರೆಸ್ ಒಕ್ಕೂಟವನ್ನು ಸೋಲಿಸಿ' ಎಂದು ಶಾ ಹೇಳಿದ್ದಾರೆ. ಎರಡು ತಿಂಗಳ ಹಿಂದೆ ಆರ್‌ಜೆಡಿ–ಕಾಂಗ್ರೆಸ್ ಜಂಟಿಯಾಗಿ ರಾಜ್ಯಾದಾದ್ಯಂತ 'ಮತದಾರರ ಅಧಿಕಾರ ಯಾತ್ರೆ' ಕೈಗೊಂಡಿದ್ದವು.

'ಚುನಾವಣೆಯಲ್ಲಿ ಇಂಡಿಯಾ ಬಣಕ್ಕೆ ಸೋಲು ಖಚಿತವಾಗಿದ್ದು, ಬಿಹಾರದಲ್ಲಿ ರಾಹುಲ್ ಗಾಂಧಿ ಅವರು ಅಂಗಡಿ ಮುಚ್ಚಲಿದೆ. 243 ಸದಸ್ಯ ಬಲದ ವಿಧಾನಸಭೆ ಚುನಾವಣೆಯಲ್ಲಿ 160 ಸ್ಥಾನಗಳನ್ನು ಗಳಿಸುವ ಮೂಲಕ ಎನ್‌ಡಿಎ ಸರ್ಕಾರ ರಚಿಸುತ್ತದೆ' ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ

'ಆರ್‌ಜೆಡಿ ಮುಖ್ಯಸ್ಥ ಲಾಲೂ ಪ್ರಸಾದ್ ಮತ್ತು ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ, ತಮ್ಮ ಪುತ್ರರ ಭವಿಷ್ಯದ ಬಗ್ಗೆ ಚಿಂತಿತರಾಗಿದ್ದಾರೆ. ಆದರೆ, ಬಿಹಾರದಲ್ಲಿ ಮುಖ್ಯಮಂತ್ರಿ, ದೇಶದಲ್ಲಿ ಪ್ರಧಾನಮಂತ್ರಿ ಹುದ್ದೆ ಖಾಲಿ ಇಲ್ಲ' ಎಂದು ಲೇವಡಿಮಾಡಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka